# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 119 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 26–11–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 119 | RNI No: KARKAN/2023/88462 | Chitradurga | Date: 26-11-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಾಲಸೌಲಭ್ಯಕ್ಕಾಗಿ ಫಲಾನುಭವಿಗಳ ಆಯ್ಕೆ: ಜಿಪಂ ಸಿಇಒ ಸೋಮಶೇಖರ್ 2

ಅಂತರ್ ಜಿಲ್ಲಾ ಟೆನ್ನಿಸ್‌ಬಾಲ್ ಕ್ರಿಕೆಟ್: ಟ್ರೋಫಿ ಗೆದ್ದ ಚಿತ್ರದುರ್ಗ ವಕೀಲರ ತಂಡ 3

ಚಿತ್ರದುರ್ಗ ನಾಯಕ ಅರಸರ ಬಗ್ಗೆ ರಾಷ್ಟ್ರೀಯ ವಿಚಾರಸಂಕಿರಣ: ಮಂಜುನಾಥ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ದೊಡ್ಡೇರಿ ಹೊರವಲಯದ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟ: 41500 ಹಣವಶ

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ದೊಡ್ಡೇರಿ ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಮಧ್ಯಾಹ್ನ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಪ್ರಹ್ಲಾದ ಮತ್ತು ಇತರೆ ನಾಲ್ವರನ್ನು ವಶಕ್ಕೆ ಪಡೆದ ಪೊಲೀಸರು ಜೂಜಾಟದ ಹಣ 41500ರೂಗಳನ್ನು ವಶಪಡಿಸಿಕೊಂಡಿದ್ದಾರೆ. ಪಿಎಸ್‌ಐ ಧರೆಪ್ಪಬಾಳಪ್ಪ ದೊಡ್ಡಮನಿ ಈ ಬಗ್ಗೆ ಮಾಹಿತಿ ನೀಡಿ, ಖಚಿತ ಮಾಹಿತಿ ಮೇರೆಗೆ ಗ್ರಾಮದ ಗಸ್ತು ಪೇದೆ ಕೆ.ಶಂಕರಣ್ಣ ಮತ್ತು ಸಿಬ್ಬಂದಿ ವರ್ಗದ ಸಹಕಾರದಿಂದ ಜೂಜುಕೋರರನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

### ವಿಫಲವಾದ ಪರಿವರ್ತಕ ಬದಲಾವಣೆ: ಹಣ ನೀಡದಂತೆ ಬೆಸ್ಕಾಂ ಸೂಚನೆ

» ಚಿತ್ರದುರ್ಗ

ವಿಫಲವಾದ ಪರಿವರ್ತಕದ ಬದಲಾವಣೆಗೆ ಮಧ್ಯವರ್ತಿ, ಏಜೆನ್ಸಿ, ಅಧಿಕಾರಿ ಹಾಗೂ ನೌಕರರಿಗೆ ಹಣ ನೀಡಬಾರದು ಎಂದು ರೈತರಿಗೆ ಹಾಗೂ ಸಾರ್ವಜನಿಕರಿಗೆ ಬೆಸ್ಕಾಂ ಸೂಚನೆ ನೀಡಿದೆ. ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿ ಬರುವ ಚಿತ್ರದುರ್ಗ ಗ್ರಾಮೀಣ, ಹೊಳಲ್ಕೆರೆ, ಹೊಸದುರ್ಗ, ಶ್ರೀರಾಂಪುರ ಉಪವಿಭಾಗದ ವ್ಯಾಪ್ತಿಯಲ್ಲಿ ಪರಿವರ್ತಕಗಳು ವಿಫಲವಾದರೆ ನಗರ ವ್ಯಾಪ್ತಿಯಲ್ಲಿ 24 ಗಂಟೆಯೊಳಗಾಗಿ ಹಾಗೂ ಗ್ರಾಮೀಣ ವ್ಯಾಪ್ತಿಯಲ್ಲಿ 72 ಗಂಟೆಯೊಳಗೆ ಪರಿವರ್ತಕವನ್ನು ಬದಲಾಯಿಸಲು ನಿಯಮವಿದ್ದು, ಬಫರ್‌ಸ್ಟಾಕ್ ಅಡಿಯಲ್ಲಿ ಎಲ್ಲಾ ಉಪವಿಭಾಗಗಳಿಗೆ ಪರಿವರ್ತಕಗಳನ್ನು ಹಂಚಿಕೆ ಮಾಡಲಾಗುತ್ತಿದ್ದು, ಈ ಪರಿವರ್ತಕಗಳನ್ನು ಚಿತ್ರದುರ್ಗ ನಗರ ಮತ್ತು ಗ್ರಾಮೀಣ ಉಪವಿಭಾಗದಲ್ಲಿ ಗಜಲಕ್ಷ್ಮೀ ಎಂಟರ್‌ಪ್ರೈಸೆಸ್ ಅವರು ಹೊಳಲ್ಕೆರೆ ಉಪವಿಭಾಗದಲ್ಲಿ ಸಾಯಿರಾಮ್ ಎಂಟರ್‌ಪ್ರೈಸ್ಸಸ್ ಅವರು ಹಾಗೂ ಹೊಸದುರ್ಗ ಮತ್ತು ಶ್ರೀರಾಂಪುರ ಉಪವಿಭಾಗದಲ್ಲಿ ವಿಘ್ನೇಶ್ವರ ಎಂಟರ್‌ಪ್ರೈಸಸ್ ಏಜೆನ್ಸಿ ಅವರಿಗೆ ನೀಡಲಾಗಿದ್ದು, ಪರಿವರ್ತಕಗಳನ್ನು ರಿಪೇರಿ ಮಾಡಿ ಸರಬರಾಜು ಮಾಡುತ್ತಿದ್ದಾರೆ. ವಿಫಲವಾದ ಪರಿವರ್ತಕ ಬದಲಾವಣೆಗೆ ಯಾರಾದರೂ ಹಣ ಕೇಳಿದ್ದಲ್ಲಿ ಹಾಗೂ ದೂರುಗಳಿಗಾಗಿ ಬೆಸ್ಕಾಂ ಚಿತ್ರದುರ್ಗ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರ ದೂರವಾಣಿ ಸಂಖ್ಯೆ 9448279014 ಹಾಗೂ ಸಹಾಯಕ ಕಾರ್ಯನಿರ್ವಾಹಕ ಇಚಿಜಿನಿಯರ್ ಅವರ ದೂರವಾಣಿ ಸಂಖ್ಯೆ 9449842739 ಗೆ ಸಂಪರ್ಕಿಸಬಹುದು.

### ಡಿಸೆಂಬರ್ 03ರಂದು ಚಿತ್ರದುರ್ಗ ತಾ.ಪಂ ಸಾಮಾನ್ಯ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಯನ್ನು ಡಿಸೆಂಬರ್ 03ರಂದು ಬೆಳಿಗ್ಗೆ 10.30ಕ್ಕೆ ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ನ.29ಕ್ಕೆ ಸಭೆ ಮುಂದೂಡಿಕೆ

» ಚಿತ್ರದುರ್ಗ

ಗ್ಯಾರಂಟಿ ಯೋಜನೆಗೆ ಸಂಬಂಧಿಸಿದಂತೆ ಇದೇ ನ.28ರಂದು ಬೆಳಿಗ್ಗೆ 10.30ಕ್ಕೆ ನಗರದ ತಾಲ್ಲೂಕು ಪಂಚಾಯಿತಿಸ ಸಭಾಂಗಣದಲ್ಲಿ ಚಿತ್ರದುರ್ಗ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಪ್ರಕಾಶ್ ಅಧ್ಯಕ್ಷತೆಯಲ್ಲಿ ನಿಗಧಿಯಾಗಿದ್ದ ಪ್ರಗತಿ ಪರಿಶೀಲನಾ ಸಭೆಯನ್ನು ಕಾರಣಾಂತರಗಳಿಂದ ನ.29ರಂದು ಬೆಳಿಗ್ಗೆ 10.30ಕ್ಕೆ ಮುಂದೂಡಲಾಗಿದೆ. ಗ್ಯಾರಂಟಿ ಯೋಜನೆಗೆ ಸಂಬಂಧಿಸಿದ ಅನುಷ್ಠಾನ ಇಲಾಖಾ ಅಧಿಕಾರಿಗಳು ಹಾಗೂ ಎಲ್ಲ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಚಿತ್ರದುರ್ಗ ತಾಲ್ಲೂಕಿನ 38 ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಕಡ್ಡಾಯವಾಗಿ ಹಾಜರಾಗಬೇಕು .

---

ಸಮುದಾಯ ಆರೋಗ್ಯಾಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ

# ತಾಯಿ, ಶಿಶು ಮರಣ ಪ್ರಮಾಣ ತಗ್ಗಿಸಲು ಕ್ರಮವಹಿಸಿ; ಜಿ.ಪಂ ಸಿಇಒ ಸೋಮಶೇಖರ್

» ಚಿತ್ರದುರ್ಗ

ಆರೋಗ್ಯ ಇಲಾಖೆಯ ಧ್ಯೇಯೋದ್ದೇಶಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ಜಿಲ್ಲೆಯಲ್ಲಿ ತಾಯಿ ಮರಣ ಹಾಗೂ ಶಿಶು ಮರಣ ಪ್ರಮಾಣ ತಗ್ಗಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಹೇಳಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಗುಣಮಟ್ಟ ಪ್ರಸವ ಪೂರ್ವ ಆರೈಕೆ ಕುರಿತು ಸಮುದಾಯ ಆರೋಗ್ಯಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ಜಿಲ್ಲಾ ಮಟ್ಟದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಶೇ.100ರಷ್ಟು ಸಾಂಸ್ಥಿಕ ಹೆರಿಗೆಗೆ ಒತ್ತು ನೀಡಬೇಕು. ಲಸಿಕಾ ಕಾರ್ಯಕ್ರಮಗಳು ಹಾಗೂ ಆರೋಗ್ಯ ಇಲಾಖೆಯ ಮಾಹಿತಿ ಶಿಕ್ಷಣ, ಸಂವಹನ





ಕಾರ್ಯಕ್ರಮಗಳನ್ನು ಪರಿಣಾಮಕಾಯಾಗಿ ಅನುಷ್ಠಾನ ಮಾಡುವ ಮೂಲಕ ಗುಣಮಟ್ಟದ ಆರೋಗ್ಯ ಸೇವೆ ಪ್ರತಿಯೊಬ್ಬ ನಾಗರಿಕರಿಗೂ ದೊರೆಯುವಂತಾಗಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ಹೆಣ್ಣುಮಕ್ಕಳು ಗರ್ಭಾವಸ್ಥೆಯಲ್ಲಿ ಉತ್ತಮವಾಗಿದ್ದು, ಆರೋಗ್ಯವಂತ ಮಗುವಿಗೆ ಜನ್ಮಕೊಟ್ಟು, ಆದಾದ ನಂತರ ಬಾಣಂತಿತನ ಸುಗಮವಾಗಿ ನಡೆಸುವ ನಿಟ್ಟಿನಲ್ಲಿ ಗುಣಮಟ್ಟ ಪ್ರಸವ ಪೂರ್ವ ಆರೈಕೆ ಬಹಳ ಮುಖ್ಯವಾಗಲಿದೆ. ಕಿಶೋರಿಯರ ಮುಟ್ಟಿನ ಸಮಸ್ಯೆ, ರಕ್ತಹೀನತೆ, ಬಾಲ್ಯವಿವಾಹ ತಡೆಗಟ್ಟುವುದು ಸೇರಿದಂತೆ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಿರ್ವಹಿಸಿದಾಗ ಒಂದು ಹೆಣ್ಣು, ಮದುವೆಯಾದ ನಂತರ ಉತ್ತಮವಾದ ಗರ್ಭಾವಸ್ಥೆ ಕಾಪಾಡಿಕೊಳ್ಳಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಗರ್ಭಿಣಿಯರು 12ನೇ ವಾರದೊಳಗೆ ಆರ್‌ಸಿಹೆಚ್ ತಂತ್ರಾಂಶದಲ್ಲಿ ನೋಂದಣಿಯಾಗಬೇಕು.

ಇದರಿಂದ ಹೆಚ್‌ಬಿ, ಬಿಪಿ ಎಷ್ಟಿದೆ ಎಂಬುದನ್ನು ಗಮನಿಸಿ, ಪ್ರತಿಯೊಂದು ವಿಚಾರವನ್ನು ಪರಿಶೀಲಿಸಿ, ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದ ಅವರು, ಹೈ ರಿಸ್ಕ್ ಪ್ರೆಗ್ನೆನ್ಸಿ ಬಗ್ಗೆ ಹೆಚ್ಚು ಗಮನ ಹರಿಸಬೇಕು ಎಂದು ಸಮುದಾಯ ಆರೋಗ್ಯಾಧಿಕಾರಿಗಳಿಗೆ ಸಲಹೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ.ಶಶಿಕಿರಣ, ಡಾ.ಮೇಘನಾ, ಡಾ.ಮೇಘ ಯಾದವ್ ಅವರು ಗುಣಮಟ್ಟ ಪ್ರಸವ ಪೂರ್ವ ಆರೈಕೆ ಕುರಿತು ಸಮುದಾಯ ಆರೋಗ್ಯಾಧಿಕಾರಿಗಳಿಗೆ ತರಬೇತಿ ನೀಡಿದರು.ಜಿಲ್ಲಾ ಸರ್ವೇಕ್ಷಣಾಧಿಕಾರಿ ಹಾಗೂ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಉಪ 'ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಸೇರಿದಂತೆ ಸಮುದಾಯ ಆರೋಗ್ಯಾಧಿಕಾರಿಗಳು ಇದ್ದರು.

---

# ವೀರದಿಮ್ಮನಹಳ್ಳಿ ಕ್ರಾಸ್‌ನಲ್ಲಿ ಬೈಕ್‌ಗೆ ಡಿಕ್ಕಿ ಹೊಡೆದ ಕಾರು: ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮಗು ಮೋನಿಕ ಸಾವು

» ಚಳ್ಳಕೆರೆ

ನಗರದ ರಾಷ್ಟ್ರೀಯ ಹೆದ್ದಾರಿ ವೀರದಿಮ್ಮನಹಳ್ಳಿ ಬಳಿ ಬೈಕ್‌ಗೆ ಡಿಕ್ಕಿ ತಪ್ಪಿಸಲು ಹೋಗಿ ಬೈಕ್‌ಗೆ ತಾಗಿ ಕಾರುಪಲ್ಟಿಯಾಗಿ ಕಾರಿನಲ್ಲಿದ್ದ ಒಟ್ಟು ನಾಲ್ವರು ಗಾಯಗೊಂಡು 11 ವರ್ಷದ ಮಗುವೊಂದು ಮೃತಪಟ್ಟ ಘಟನೆ ವರದಿಯಾಗಿದೆ.

ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಗ್ರಾಮದ ಸಂಬಂಧಿಕರ ಮದುವೆಗೆ ಗೌರಿಬಿದನೂರಿನ ಕುಟುಂಬವೊಂದು ತೆರಳಿ ಮದುವೆ ಮುಗಿಸಿಕೊಂಡು ಸೋಮವಾರ ವಾಪಾಸ್ ಬರುವ ಸಂದರ್ಭದಲ್ಲಿ ಮಧ್ಯಾಹ್ನ



ಈ ಘಟನೆ ಸಂಭವಿಸಿದೆ. ಕಾರುಚಾಲಕ ವೈ. ಗಿರಿಧರ ವೀರದಿಮ್ಮನಹಳ್ಳಿ ಕ್ರಾಸ್‌ಬಳಿ ಅಡ್ಡಬಂದ ಬೈಕಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಪ್ರಯತ್ನಿಸಿದ್ದು, ಕಾರುಬೈಕ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಬೈಕ್ ಸವಾರ ಸಹ ಬೈಕ್ ಸಹಿತ ರಸ್ತೆ ಮೇಲೆ ಬಿದ್ದಿದ್ದಾನೆ. ಕೂಡಲೇ ಸ್ಥಳೀಯರು ಗಾಯಗೊಂಡ ಚಾಲಕ ವೈ.ಗಿರಿಧರ(37), ಜಾನಕಮ್ಮ(55), ವೈ.ವಿದ್ಯಾಧರ(34) ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದು, ಗಿರಿಧರ ಪುತ್ರ ಮೋನಿಷ್(11) ಅಪಘಾತದ ರಭಸಕ್ಕೆ ಕಾರಿನಿಂದ ಹೊರಗೆ ಬಿದಿದ್ದು, ಕೂಡಲೇ ಮಗುವನ್ನು ಆಸ್ಪತ್ರೆಗೆ ದಾಖಲಿಸಿದಾಗ ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಪಿಎಸ್‌ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.


ಪುಟ 2




ಹೊಸದುರ್ಗದ ಪತ್ರಕರ್ತ ಹಾಗೂ ಸಾಹಿತಿ ನಾಗತಿಹಳ್ಳಿಮಂಜುನಾಥ್ ಅವರ ಮನೆಯಂಗಳದಲ್ಲಿ ಭಾನುವಾರ ತಡರಾತ್ರಿ ಬ್ರಹ್ಮ ಕಮಲ ಅರಳಿರುವುದು. ಅರಳಿದ ಹೂವುಗಳಿಗೆ ಪೂಜೆ ಮಾಡಲಾಯಿತು.

---

## ಪ್ರಮುಖ ಸುದ್ದಿ

ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ

# ಸಾಧನೆಗೆ ಅಂಗವೈಕಲ್ಯ ಅಡ್ಡಿಯಾಗದು: ಎಂ.ವಿಜಯ್

» ಚಿತ್ರದುರ್ಗ

ಜೀವನದಲ್ಲಿ ಸಾಧಿಸುವ ಛಲ, ಕಠಿಣ ಪರಿಶ್ರಮ ಇದ್ದರೆ ಸಾಧನೆಗೆ ಅಂಗವೈಕಲ್ಯ ಅಡ್ಡಿಯಾಗದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಏರ್ಪಡಿಸಿದ ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಗವಿಕಲರು ತಮ್ಮ ದೈಹಿಕ ನ್ಯೂನತೆಗಳ ಬಗ್ಗೆ ಕೀಳರಿಮೆ ಬಿಡಬೇಕು. ವಿಕಲಚೇತನರು ಪ್ಯಾರಾ ಒಲಂಪಿಕ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿಯೂ ಉತ್ತಮ ಸಾಧನೆ ತೋರಿದ್ದಾರೆ. ಹಾಗಾಗಿ ಅಂಗವಿಕಲತೆ ಎಂಬ ಕೀಳರಿಮೆಯನ್ನು





ಮನಸ್ಸಿನಿಂದ ಬಿಟ್ಟು, ತಮ್ಮ ಗುರಿಯೊಂದಿಗೆ ಕ್ರಿಯಾಯೋಜನೆ ರೂಪಿಸಿಕೊಂಡು ಕಠಿಣ ಪರಿಶ್ರಮಪಟ್ಟರೆ ಸಾಧನೆ ಮಾಡುವುದು ಕಷ್ಟಕರವೇನಲ್ಲ ಎಂದು ಹೇಳಿದರು.

ಅಂಗವಿಕಲತೆ ಎಂಬ ಕೀಳರಿಮೆ ಬಿಟ್ಟು, ಸಾಧನೆ ಕಡೆ ಗಮನಹರಿಸಿ, ಸಮಾಜದಲ್ಲಿ ಸ್ವಾವಲಂಬನೆಯಿಂದ ಬದುಕುವ ನಿಟ್ಟಿನಲ್ಲಿ ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಹಾಗೂ ಗೌರವಯುತ ಜೀವನ ಸಾಗಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಈ ಬಾರಿ ಒಂದು ವಾರ ವಿಕಲಚೇತನರ ಸಪ್ತಾಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ವಿಕಲಚೇತನರಿಗಾಗಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು, ಕಾನೂನು ಸೇವಾ ಪ್ರಾಧಿಕಾರದ ಸಹಯೋಗದೊಂದಿಗೆ ಕಾನೂನು ಅರಿವು–ನೆರವು ಕಾರ್ಯಕ್ರಮ, ಶಾಲಾ–ಕಾಲೇಜುಗಳಲ್ಲಿ 2016ರ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಗಮನಸೆಳೆದ ವಿಕಲಚೇತನರ ಕ್ರೀಡಾಕೂಟ: ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಿಕಲಚೇತನರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಗಮನ ಸೆಳೆದವು.

ಕ್ರೀಡಾ ಸ್ಪರ್ಧೆ ವಿಭಾಗದಲ್ಲಿ 18ವರ್ಷ ಮೇಲ್ಪಟ್ಟ ಶ್ರವಣ ದೋಷ ಮತ್ತು ದೈಹಿಕ ವಿಕಲಚೇತರಿಗೆ 100ಮೀ ಓಟ, ಗುಂಡು ಎಸೆತ, ಜಾವಲಿನ್ ಥ್ರೋ ಮತ್ತು ಬುದ್ದಿಮಾಂದ್ಯರಿಗೆ 100ಮೀ ಓಟ, ಬಕೆಟ್‌ನಲ್ಲಿ ರಿಂಗ್ ಎಸೆತ, ಮ್ಯೂಜಿಕಲ್ ಚೇರ್ ಹಾಗೂ ಅಂಧ ವಿಶೇಷಚೇತನರಿಗೆ ಮಡಿಕೆ ಹೊಡೆಯುವುದು, ಕೇನ್ ರೇಸ್ ಸ್ಪರ್ಧೆಗಳು ನಡೆದವು.

ಸಾಂಸ್ಕೃತಿಕ ಸ್ಪರ್ಧೆ ವಿಭಾಗದಲ್ಲಿ 18 ವರ್ಷ ಮೇಲ್ಪಟ್ಟ ದೃಷ್ಟಿದೋಷ, ದೈಹಿಕ ಮತ್ತು ಬೌದ್ಧಿಕ ವಿಕಲತೆ ವಿಕಲಚೇತನರಿಗೆ ಜಾನಪದ ಗೀತೆ, ಭಾವಗೀತೆ, ಭಕ್ತಿಗೀತೆ ಸ್ಪರ್ಧೆಗಳು ಜರುಗಿದವು. ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಕಲಚೇತನರು ಸಂತೋಷ ಹಾಗೂ ಉತ್ಸಾಹದಿಂದ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರೂಪಣಾಧಿಕಾರಿ ವಿಜಯ್ ಕುಮಾರ್, ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎ.ಎಂ.ವೀಣಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸೋಮಶೇಖರ್, ದೈಹಿಕ ಶಿಕ್ಷಣ ಶಿಕ್ಷಕ ಮಲ್ಲೇಶ್ ಸೇರಿದಂತೆ ಎಂ.ಆರ್.ಡಬ್ಲ್ಯೂ, ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂಗಳು ಹಾಗೂ ವಿಕಲಚೇತನರು ಇದ್ದರು.

## ಫಾಸ್ಟ್ ನ್ಯೂಸ್

### ಬೈಕ್‌ಗೆ ಡಿಕ್ಕಿ ಹೊಡೆದ ಕಾರು: ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮಗು ಮೋನಿಕ ಸಾವು

» ಮೊದಲ ಪುಟದಿಂದ

ಇತ್ತೀಚೆಗೆ ತಾನೇ ವೀರದಿಮ್ಮನಹಳ್ಳಿ ಬಳಿ ನಿರ್ಮಾಣಗೊಂಡ ಹೊಸ ಬೈಪಾಸ್‌ನಲ್ಲಿ ಸೂಕ್ತ ನಾಮಫಲಕವಿಲ್ಲದೆ ಅಪಘಾತಗಳು ನಿರಂತರ ಜರುಗುತ್ತಿದ್ದು, ಈ ಬಗ್ಗೆ ಜಿಲ್ಲಾಡಳಿತ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸಾರ್ವಜನಿಕರ ಹಿತದೃಷ್ಟಿಯಿಂದ ಮೇಲುಸೇತುವೆ ನಿರ್ಮಿಸುವಂತೆ ಸ್ಥಳದಲ್ಲಿದ್ದ ಪ್ರತ್ಯಕ್ಷದರ್ಶಿ ಕರೀಕೆರೆ ನಾಗರಾಜು ಸರ್ಕಾರವನ್ನು ಒತ್ತಾಯಿಸಿದ್ದಾರೆ.

### ನ.26ರಂದು ವಿದ್ಯುತ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರು ಉಪವಿಭಾಗದ ವ್ಯಾಪ್ತಿಯ ರಂಗನಾಥಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 3ನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ನಿರ್ವಹಿಸುವುದರಿಂದ ಇದೇ ನ.26ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ರಂಗನಾಥಪುರ, ಹಾರನಕಟ್ಟೆ, ಕುಂದಲಗುರು, ಕುರುಬರಹಳ್ಳಿ, ಸಮುದ್ರದಹಳ್ಳಿ, ಮ್ಯಾದನಹೊಳೆ, ಕೋಡಿಹಳ್ಳಿ, ಶಿವಪುರ, ಶಿವನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ ವ್ಯತ್ಯಯವಾಗಲಿದೆ. ಗ್ರಾಹಕರು,ರೈತರು,ಸಾರ್ವಜನಿಕರು ಸಹಕರಿಸಬೇಕು ಎಂದು ಹಿರಿಯೂರು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಹೆಚ್.ಪೀರ್‌ಸಾಬ್ ಕೋರಿದ್ದಾರೆ.

### ನವೋದಯ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯದ 2025–26ನೇ ಸಾಲಿಗೆ 9 ಮತ್ತು 11 ತರಗತಿ ತರಗತಿಯ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಆಡಳಿತಾತ್ಮಕ ಕಾರಣಗಳಿಂದ ಇದೇ ನ.26 ರವರೆಗೆ ವಿಸ್ತರಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು 9ನೇ ತರಗತಿಗೆ https://cbseitms.nic.in/2024/nvsix/registrationclasssIX/registrationclasssIX/ 11£ÉA vAgÀUÀwUÉ https://cbseitms.nic.in/2024/nvsix11/registrationclasssXI//registrationclasssXI ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರು ತಿಳಿಸಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಕೆಗೆ ಡಿ.03 ಕೊನೆ ದಿನ

» ಚಿತ್ರದುರ್ಗ

ಜಿಲ್ಲೆಯ ಭರಮಸಾಗರ, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ, ಹೊಸದುರ್ಗ ಮತ್ತು ಮೊಳಕಾಲ್ಮೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ 64 ಅಂಗನವಾಡಿ ಕಾರ್ಯಕರ್ತೆ, 3 ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ 149 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಲಾಗಿದ್ದು, ಡಿ.03 ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ತಾತ್ಕಾಲಿಕವಾಗಿ ಆಯ್ಕೆಯಾಗಿರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಪಟ್ಟಿಯನ್ನು ಆಯಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಅಂಗನವಾಡಿ ಕೇಂದ್ರ, ಗ್ರಾಮ ಪಂಚಾಯತಿ, ಶಾಲೆ, ಸಮುದಾಯ ಭವನ ಹಾಗೂ ಗ್ರಂಥಾಲಯ ಸೂಚನಾ ಫಲಕಗಳಲ್ಲಿ ಪ್ರಕಟಿಸಲಾಗಿದ್ದು, ಈ ಕುರಿತು ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ಸೂಕ್ತ ದಾಖಲೆಗಳೊಂದಿಗೆ 2024ರ ಡಿ.3ರ ಸಂಜೆ 5.30ರೊಳಗೆ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು. ತಡವಾಗಿ ಬಂದ ಹಾಗೂ ಸೂಕ್ತ ದಾಖಲೆಗಳಿಲ್ಲದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ .

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಮಹಾನಗರಪಾಲಿಕೆ ವತಿಯಿಂದ ತುರ್ತು ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನ.26 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಮೌನೇಶ್ವರ ಫೀಡರ್ ವ್ಯಾಪ್ತಿಯ ಹೆಚ್.ಕೆ.ಆರ್. ಸರ್ಕಲ್ ನಿಟುವಳ್ಳಿ,ಹೊಸಬಡಾವಣೆ, ಸಾಯಿ ಗಾರ್ಮೆಂಟ್, ಹಾಲೊಳ ಬಿಲ್ಡಿಂಗ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ,

## ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ಸಭೆ

# ಸಾಲಸೌಲಭ್ಯಕ್ಕಾಗಿ ಫಲಾನುಭವಿಗಳ ಆಯ್ಕೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ 2024–25ನೇ ಸಾಲಿಗೆ 11 ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಯಗಳಡಿ ಸಾಲ, ಸಹಾಯಧನ ಕೋರಿ ಸ್ವೀಕೃತಗೊಂಡ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಂಬಂಧ ಆಯ್ಕೆ ಸಮಿತಿ ಸಭೆ ನಡೆಯಿತು. ಸಭೆಯ ಸಂಪೂರ್ಣ ವಿಡಿಯೋ ಚಿತ್ರೀಕರಿಸಿ, ಪಾರದರ್ಶಕವಾಗಿ ಸಭೆ ಮಾಡಲಾಯಿತು.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ 12 ಗುರಿ ನಿಗಧಿಯಾಗಿದ್ದು 36 ಅರ್ಜಿಗಳು ಸ್ವೀಕೃತವಾಗಿದ್ದು, ಇದರಲ್ಲಿ 12 ಫಲಾನುಭವಿಯನ್ನು ಆಯ್ಕೆ ಮಾಡಲಾಯಿತು. ಹಾಗೆಯೇ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–24 ನಿಗಧಿಯಾಗಿದ್ದು, 31 ಅರ್ಜಿಗಳು ಬಂದಿದ್ದು,ಇದರಲ್ಲಿ24ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಗುರಿ–19 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–237, ಇದರಲ್ಲಿ 19–ಫಲಾನುಭವಿಯನ್ನು ಆಯ್ಕೆ ಮಾಡಲಾಯಿತು. ಶೈಕ್ಷಣಿಕ ನೇರ ಸಾಲಕ್ಕೆ ಗುರಿ–02 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು–04, ಇದರಲ್ಲಿ 02 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮಕ್ಕೆ ಗುರಿ–10 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–625 ಇದರಲ್ಲಿ 10–ಫಲಾನುಭವಿಯನ್ನು ಆಯ್ಕೆ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–04, ಅರ್ಜಿಗಳು ಬಂದಿರುವುದು–05, 04 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.




ನಿಜಶರಣಅಂಬಿಗರಚೌಡಯ್ಯಅಭಿವೃದ್ಧಿ ನಿಗಮಕ್ಕೆ ಗುರಿ–14 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–133, ಇದರಲ್ಲಿ 14 ಫಲಾನುಭವಿಯನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮಕ್ಕೆ ಗುರಿ–25 ನಿಗಧಿಯಾಗದ್ದು, ಅರ್ಜಿಗಳು ಬಂದಿರುವುದು ಒಟ್ಟು–553 ಇದರಲ್ಲಿ 25–ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮಕ್ಕೆ ಗುರಿ–17 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–219 ಇದರಲ್ಲಿ 17 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಗುರಿ–27 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–2718 ಇದರಲ್ಲಿ 27–ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–04 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು–25 ಇದರಲ್ಲಿ 04 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮಕ್ಕೆ ಗುರಿ–21 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–1420, ಇದರಲ್ಲಿ 21 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–25 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು–40, ಇದರಲ್ಲಿ 25 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು

ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಗುರಿ–31 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–396, ಇದರಲ್ಲಿ 31 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–10 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು–15, ಇದರಲ್ಲಿ 10 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಗುರಿ–49 ನಿಗಧಿಯಾಗಿದ್ದು, ಅರ್ಜಿಗಳು ಬಂದಿರುವುದು ಒಟ್ಟು–35, ಇದರಲ್ಲಿ 35 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೇರ ಸಾಲಕ್ಕೆ ಗುರಿ–06 ನಿಗಧಿಯಾಗಿದ್ದು, ಇಬ್ಬರು ಅರ್ಜಿ ಸಲ್ಲಿಸಿದ್ದು, ಅರ್ಜಿ ಸಲ್ಲಿಕೆ ಮಾಡಿದ ಇಬ್ಬರು ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು.

ಕರ್ನಾಟಕ ಆರ್ಯ ವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಗುರಿ–23 ನಿಗಧಿಯಾಗಿದ್ದು, 81 ಅರ್ಜಿಗಳು ಸಲ್ಲಿಕೆಯಾಗಿದ್ದು, ಇದರಲ್ಲಿ 23 ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು. 2024–25ನೇ ಸಾಲಿಗೆ ಗಂಗಾಕಲ್ಯಾಣ ಯೋಜನೆಯಡಿ ಸೌಲಭ್ಯ ಕೋರಿ ಸ್ವೀಕೃತಗೊಂಡ ಅರ್ಹ ಫಲಾಪೇಕ್ಷಿಗಳಿಗೆ ಕೊಳವೆ ಬಾವಿ ಸೌಲಭ್ಯ ಒದಗಿಸಲು ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಿಲಾಯಿತು. ಮಂಜೂರಾತಿಗಾಗಿ ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯಲಾಯಿತು.

ಸಭೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುಬ್ರನಾಯಕ, ಸಹಕಾರ ಸಂಘಗಳ ಉಪನಿಬಂಧಕ ದಿಲೀಪ್ ಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಪವಿತ್ರ, ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಆನಂದ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ ಸೇರಿದಂತೆ ವಿವಿಧ ಇಲಾಖೆಯ ಆಯ್ಕೆ ಸಮಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ನಿಗದಿತ ಸಮಯದೊಳಗೆ ಕಾಮಗಾರಿ ಮುಗಿಸಿ; ಶಾಸಕ

» ದಾವಣಗೆರೆ

ಅಂದಾಜು ಪಟ್ಟಿಗೆ ಅನುಗುಣವಾಗಿ ಗುಣಮಟ್ಟದ ಕಾಮಗಾರಿಗಳನ್ನು ಕೈಗೊಂಡು ನಿಗದಿತ ಸಮಯದೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಶಾಸಕ ಕೆ.ಎಸ್.ಬಸವಂತಪ್ಪ ಗುತ್ತಿಗೆದಾರ ಮತ್ತು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಗುಡಾಳ್ ಗ್ರಾಮದ ವಿವಿಧ ಕಾಲೋನಿಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ನಿರ್ಮಿಸುತ್ತಿರುವ 2024–25ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಬೂದು ನೀರು ನಿರ್ವಹಣೆ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸರ್ಕಾರದ ಹಣ ಪೋಲು ಮಾಡದಂತೆ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಶಾಶ್ವತವಾಗಿ ಉಳಿಯಬೇಕು. ಆಗ ಮಾತ್ರ ನಿಮಗೂ, ನಮಗೂ ಮತ್ತು ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ. ಈ ನಿಟ್ಟಿನಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ಆಗದಂತೆ ಗುತ್ತಿಗೆದಾರರು ಮತ್ತು ಅಧಿಕಾರಿಗಳು ನಿಗಾ ವಹಿಸಬೇಕೆಂದು ತಾಕೀತು ಮಾಡಿದರು.



ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಇಒ ರಾಮಭೋವಿ, ಜಿಪಂ ಸಹಾಯಕ ಕಾರ್ಯನಿರ್ವಹಣಾಧಿಕಾರಿ ಶಿವಮೂರ್ತಿ, ಗುಡಾಳ್ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿ.ಎನ್.ಪ್ರಭು, ತಾಪಂ ಮಾಜಿ ಸದಸ್ಯ ಬಿ.ಎಂ.ಶಂಭುಲಿಂಗಪ್ಪ, ಪಿಡಿಒ ರಾಘವೇಂದ್ರ ನಾಯಕ್ ಹಾಗೂ ಗ್ರಾಮಸ್ಥರು ಇದ್ದರು.

**ಹಳ್ಳಕ್ಕೆ ಭೇಟಿ:** ಗುಡಾಳು ಗ್ರಾಮದ ಬಳಿ ಇರುವ ಹಳ್ಳಕ್ಕೆ ಭೇಟಿ ನೀಡಿದ ಶಾಸಕ ಕೆ.ಎಸ್.ಬಸವಂತಪ್ಪ ಪರಿಶೀಲನೆ ನಡೆಸಿದರು. ಮಳೆ ಬಂದ ಸಂದರ್ಭದಲ್ಲಿ ಹಳ್ಳ ತುಂಬಿ ಹರಿಯುತ್ತದೆ. ಇದರಿಂದಾಗಿ ಜಮೀನುಗಳಿಗೆ ಹೋಗಿ ಬರಲು ಸಾಕಷ್ಟು ತೊಂದರೆ ಆಗುತ್ತದೆ. ಈ ಹಳ್ಳಕ್ಕೆ ಸೇತುವೆ ನಿರ್ಮಾಣ ಮಾಡುವಂತೆ ರೈತರು ಶಾಸಕರಿಗೆ ಮನವಿ ಮಾಡಿದರು.

ರೈತರ ಸಮಸ್ಯೆ ಆಲಿಸಿದ ಶಾಸಕರು, ಕೂಡಲೇ ಸಂಬಂಧಪಟ್ಟ ಇಂಜಿನಿಯರ್‌ಗೆ ದೂರವಾಣಿ ಸಂಪರ್ಕಿಸಿ ಗುಡಾಳು ಹಳ್ಳಕ್ಕೆ ಸೇತುವೆ ನಿರ್ಮಿಸುವಂತೆ ಸೂಚನೆ ನೀಡಿದರು.

# ಮನೆ ಮನೆಗೆ ಗ್ಯಾಸ್ ಪೈಪ್‌ಲೈನ್ ಅಳವಡಿಕೆ ಕಾಮಗಾರಿಗೆ ಚಾಲನೆ



» ಚಿತ್ರದುರ್ಗ

ಮನೆ ಮನೆಗೂ ಅಡುಗೆ ಅನಿಲ ಪೂರೈಸುವ ಕಾಮಗಾರಿಗೆ ನಗರಸಭೆ ಸದಸ್ಯ ಹೆಚ್.ಶ್ರೀನಿವಾಸ್ ಸ್ಟೇಡಿಯಂ ಸಮೀಪ ಸೋಮವಾರ ಚಾಲನೆ ನೀಡಿದರು.ಗ್ಯಾಸ್ ಪೈಪ್‌ಲೈನ್ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದ ಹೆಚ್.ಶ್ರೀನಿವಾಸ್ ಈ ಪದ್ದತಿಯಡಿ ಪ್ರತಿ ಮನೆಗೆ ಮೀಟರ್ ಅಳವಡಿಸಲಾಗುವುದು. ಇದರಿಂದ ಗ್ರಾಹಕರಿಗೆ ಪ್ರಯೋಜನವಾಗಲಿದೆ. ನಗರದ ಬಹುತೇಕ ಎಲ್ಲಾ ಕಡೆ ಪೈಪ್‌ಲೈನ್ ಅಳವಡಿಕೆ ಕಾರ್ಯ ಆರಂಭಗೊಂಡಿದೆ ಎಂದು ಹೇಳಿದರು.ದೇವೇಶ್ ಚಾವಡ, ಮಹೇಶ್ ಸಾಳಂಕೆ, ಸತ್ಯರಂಜನ್ ಸಾಹು, ಶಿವಾನಂದಗುಬ್ಬಿ, ಸುನೀಲ್ ಉಡುಪಿ, ಪ್ರಶಾಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಶಿಕ್ಷಣ ಕೇವಲ ಅಂಕಕ್ಕಷ್ಟೆ ಸೀಮಿತವಾಗಬಾರದು: ಕುಂಬಾರ್

» ಚಿತ್ರದುರ್ಗ

ಉನ್ನತ ಶಿಕ್ಷಣ ಜಾಗತಿಕ ಮಟ್ಟದಲ್ಲಿ ಬದಲಾವಣೆಯಾಗುತ್ತಿರುವುದರಿಂದ ತಂತ್ರಜ್ಞಾನದ ಬಗ್ಗೆ ಜ್ಞಾನ ಬೆಳೆಸಿಕೊಂಡರೆ ಗುಣಾತ್ಮಕ ಜೀವನ ನಡೆಸಬಹುದೆಂದು ದಾವಣಗೆರೆ ವಿಶ್ವವಿದ್ಯಾನಿಲಯದ ಉಪ ಕುಲಪತಿ ಡಾ.ಬಿ.ಡಿ.ಕುಂಬಾರ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರ ನಡೆದ ಪದವಿ ಪ್ರಮಾಣ ಸಮಾರಂಭ ಉದ್ಘಾಟಿಸಿ ಮಾತನಾಡಿದ ಡಾ.ಬಿ.ಡಿ.ಕುಂಬಾರ್ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಹಿಂದುಳಿದ ವರ್ಗಗಳ ಹರಿಕಾರ ದಿ.ದೇವರಾಜ್ ಅರಸ್‌ರವರ ಹೆಸರನ್ನಿಟ್ಟುಕೊಂಡು ಆರಂಭಿಸಿದ ಸಂಸ್ಥೆ ಹೆಮ್ಮರವಾಗಿ ಬೆಳೆದು ನಿಂತಿರುವುದು ನಿಜಕ್ಕೂ ಹೆಮ್ಮೆಯ ವಿಷಯ.ಪದವಿಯ ನಂತರ ಉದ್ಯೋಗಕ್ಕೆ ಉತ್ಸುಕರಾಗಿರುವ ನೀವುಗಳು ತಂತ್ರಜ್ಞಾನ ಬೆಳೆಸಿಕೊಂಡು ಗುಣಾತ್ಮಕ ಬದಲಾವಣೆಯನ್ನು ಶೈಕ್ಷಣಿಕ ರಂಗದಲ್ಲಿ ಅಳವಡಿಸಿಕೊಂಡು ಬೆಳೆಯಬೇಕಿದೆ. ಮಾಹಿತಿ ತಂತ್ರಜ್ಞಾನವನ್ನು ಕರಗತ ಮಾಡಿಕೊಂಡಿರುವ ವಿದ್ಯಾರ್ಥಿಗಳು ಗುಣಾತ್ಮಕ ಶಿಕ್ಷಣಕ್ಕೆ ಒತ್ತು ಕೊಡುತ್ತಿಲ್ಲದಿರುವುದು ಬೇಸರ ಸಂಗತಿ ಎಂದು ವಿಷಾಧಿಸಿದರು.

ಶಿಕ್ಷಣ ಕೇವಲ ಅಂಕಕ್ಕಷ್ಟೆ ಸೀಮಿತವಾಗಬಾರದು. ಪದವಿಯ ಜೊತೆ ಕೌಶಲ್ಯವಿದ್ದಾಗ ಮಾತ್ರ ದೊಡ್ಡ ಉದ್ಯಮಿಯಾಗಿ ಸ್ವಾವಲಂಭಿ ಬದುಕು ಕಂಡುಕೊಳ್ಳಬಹುದು. 25 ರಿಂದ 30 ಲಕ್ಷ ಮಕ್ಕಳು ಭಾರತದಿಂದ ವಿದೇಶಕ್ಕೆ ಶಿಕ್ಷಣಕ್ಕಾಗಿ ಹೋಗುತ್ತಿದ್ದಾರೆ. ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ನಮ್ಮ ಮಕ್ಕಳು ಹೋಗಿ ಬರುವ ಅವಕಾಶವನ್ನು ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಕಲ್ಪಿಸಲಾಗುವುದು. ಕೌಶಲ್ಯವಿಲ್ಲದ ವಿದ್ಯಾರ್ಥಿಗಳು ನಿರುದ್ಯೋಗಿಗಳಾಗುತ್ತಾರೆ. ಎಲ್ಲರೂ ಸರ್ಕಾರಿ ಉದ್ಯೋಗಕ್ಕಾಗಿಯೇ ಕಾಯುವ ಬದಲು ಯಶಸ್ವಿ ಉದ್ಯಮಿಯಾಗುವಂತ ತರಬೇತಿ ಪಡೆಯಬೇಕು. ಶಿಕ್ಷಣ ಸಾಕಷ್ಟು ಬೆಳೆಯುತ್ತಿರುವುದರಿಂದ ಕನಿಷ್ಠ ಸ್ನಾತಕೋತ್ತರ ಶಿಕ್ಷಣವನ್ನು ವಿದ್ಯಾರ್ಥಿಗಳು ಪಡೆಯಲೇಬೇಕೆಂದು ತಿಳಿಸಿದರು.




ಪದವಿ ಪ್ರಮಾಣ ಸ್ವೀಕಾರ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಸಂಸ್ಥಾಪಕರು ಹಾಗೂ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ಉದ್ಯೋಗಕ್ಕಾಗಿಯೇ ಪದವಿ ಪಡೆಯುವಂತಾಗಬಾರದು. ಪ್ರತಿಯೊಬ್ಬರಲ್ಲಿಯೂ ಸಾಧನೆಯ ಛಲವಿದ್ದಾಗ ಮಾತ್ರ ಜೀವನದಲ್ಲಿ ಸ್ವ–ಉದ್ಯೋಗಿಗಳಾಗಬಹುದು. ಒಂದು ಕಾಲದಲ್ಲಿ ಅತ್ಯಂತ ಕಡು ಬಡತನದಲ್ಲಿದ್ದ ಇನ್‌ಫೋಸಿಸ್‌ನ ನಾರಾಯಣಮೂರ್ತಿ ಈಗ ಲಕ್ಷಾಂತರ ಮಂದಿಗೆ ಉದ್ಯೋಗ ಕೊಟ್ಟಿದ್ದಾರೆ. ಪದವಿ ಸರ್ಟಿಫಿಕೇಟ್ ಕೇವಲ ಅಂಕಗಳಿಗಷ್ಟೆ ಸೀಮಿತವಾಗಬಾರದು. ಜ್ಞಾನ ಹೆಚ್ಚಿಸಿಕೊಳ್ಳಲು ಸಹಕಾರಿಯಾಗಬೇಕೆಂದು ಹೇಳಿದರು.

ಪದವಿ ಪಡೆದ ಎಲ್ಲರಿಗೂ ಸರ್ಕಾರಿ ನೌಕರಿ ಸಿಗುವುದು ಕಷ್ಟ. ಸ್ವಾವಲಂಭಿಗಳಾಗಿ ಜೀವನದಲ್ಲಿ ಸಾರ್ಥಕತೆ ಕಂಡುಕೊಳ್ಳಿ. ನಮ್ಮ ಸಂಸ್ಥೆಯಲ್ಲಿ ನರ್ಸಿಂಗ್ ವ್ಯಾಸಂಗ ಮಾಡಿ ಹೊರ ಹೋದವರು ಈಗ ದೇಶ–ವಿದೇಶಗಳಲ್ಲಿ ಕೆಲಸ ಮಾಡುತ್ತಿರುವುದು ನಮಗೆ ಹೆಮ್ಮೆಯಾಗಿದೆ. ಸಾಮಾಜಿಕ ಪ್ರಜ್ಞೆ ಬೆಳೆಸಿಕೊಂಡು ಗುರು–ಹಿರಿಯರು, ಪೋಷಕರು ಹಾಗೂ ಸಮಾಜಕ್ಕೆ ಗೌರವ ಬರುವ ರೀತಿಯಲ್ಲಿ ನಡೆದುಕೊಳ್ಳಿ ಎಂದು ಪದವಿ ಪ್ರಮಾಣ ಸ್ವೀಕರಿಸಿದ ವಿದ್ಯಾರ್ಥಿಗಳಿಗೆ ತಿಳಿಸಿದರು.

ಲಾಭದ ದೃಷ್ಟಿಯಿಂದ ಸಂಸ್ಥೆಯನ್ನು ಕಟ್ಟಿಲ್ಲ. ಮೂವತ್ತು ವರ್ಷಗಳಿಂದ ಶಾಸಕನಾಗಿ ರಾಜಕೀಯ ಮಾಡುತ್ತಿದ್ದೇನೆ. ಎಲ್ಲಿಯೂ ಕಪ್ಪುಚುಕ್ಕೆಯಿಲ್ಲದೆ ಕ್ಷೇತ್ರದ ಜನರ ಸೇವೆ ಸಲ್ಲಿಸುತ್ತಿದ್ದೇನೆಂದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಮಾತನಾಡಿ ನಲವತ್ತು ವರ್ಷಗಳ ಹಿಂದೆ ಆರಂಭಗೊಂಡ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಐದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ನಾಲ್ಕು ಪದವಿ ಕಾಲೇಜುಗಳಿಂದ 415 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪದವಿ ಪ್ರಮಾಣ ಸ್ವೀಕರಿಸುತ್ತಿರುವುದು ಎಲ್ಲಿಲ್ಲದ ಖುಷಿ ಕೊಟ್ಟಿದೆ. ಸಾವಿರಾರು ಕುಟುಂಬಗಳಿಗೆ ಸಂಸ್ಥೆ ಅನ್ನ ನೀಡುತ್ತಿರುವಷ್ಟರ ಮಟ್ಟಿಗೆ ಬೆಳೆದಿದೆಯೆಂದರೆ ಅದಕ್ಕೆ ಸಂಸ್ಥಾಪಕರಾದ ಡಾ.ಎಂ.ಚಂದ್ರಪ್ಪನವರ ಪರಿಶ್ರಮವಿದೆ ಎಂದರು.

ನಮ್ಮ ಸಂಸ್ಥೆಯಲ್ಲಿ ಓದಿದವರಲ್ಲಿ 3700 ವಿದ್ಯಾರ್ಥಿಗಳು ಶಿಕ್ಷಕರುಗಳಾಗಿದ್ದಾರೆ. ಇದುವರೆವಿಗೂ ಐದು ಸಾವಿರ ವಿದ್ಯಾರ್ಥಿಗಳು ಪದವಿ ತೆಗೆದುಕೊಂಡಿದ್ದಾರೆ. ಇಲ್ಲಿ ಓದಿದವರಲ್ಲಿ ಕೆಲವರು ಜಿಲ್ಲಾಧಿಕಾರಿ, ಪೊಲೀಸ್ ವರಿಷ್ಠಾಧಿಕಾರಿ, ಉಪ ವಿಭಾಗಾಧಿಕಾರಿ, ತಹಶೀಲ್ದಾರ್‌ಗಳಾಗಿದ್ದಾರೆ. ಲಾಭದ ಆಸೆಗೆ ಸಂಸ್ಥೆ ಕಟ್ಟಿಲ್ಲ. ಎರಡು ಸಾವಿರಕ್ಕೂ ಹೆಚ್ಚು ನರ್ಸ್‌ಗಳನ್ನು ಸಮಾಜಕ್ಕೆ ಕೊಟ್ಟಿದ್ದೇವೆ. 2017–18 ರಲ್ಲಿ ಆದ್ಯ ಕಾಲೇಜ್ ಆಫ್ ಫಾರ್ಮಸಿ ತೆರೆಯಲಾಗಿದೆ. ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಆರಂಭವಾಗಿದೆ. ಮುಂದಿನ ದಿನಗಳಲ್ಲಿ ಮೆಡಿಕಲ್ ಕಾಲೇಜು ಆರಂಭಿಸುವ ಚಿಂತನೆಯಿದೆ ಎಂದು ತಿಳಿಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಚಂದ್ರಕಲಾ, ಅಧ್ಯಕ್ಷೆ ಯಶಸ್ವಿನಿ ಕಿರಣ್, ವೆಂಕಟೇಶ್ವರ ಬಿ.ಇ.ಡಿ.ಕಾಲೇಜಿನ ಪ್ರಾಚಾರ್ಯರಾದ ಡಾ.ಬಿ.ಸಿ.ಅನಂತರಾವ್,, ವೆಂಕಟೇಶ್ವರ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಎ.ಜೆ.ಶಿವಕುಮಾರ್, ಎಸ್.ಎಲ್.ವಿ.ಸ್ಕೂಲ್ ಅಂಡ್ ಕಾಲೇಜ್ ಆಫ್ ನರ್ಸಿಂಗ್ ಪ್ರಿನ್ಸಿಪಾಲ್ ಎಂ.ಎಂ.ಮಹಾಂತೇಶ್, ಆದ್ಯಾ ಕಾಲೇಜ್ ಆಫ್ ಫಾರ್ಮಸಿ ಪ್ರಾಚಾರ್ಯರಾದ ಡಾ.ಪಾಲಾಕ್ಷ ಎಂ.ಎನ್.ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಪೊಲೀಸ್ ವಾರ್ಷಿಕ ಕ್ರೀಡಾಕೂಟ

» ದಾವಣಗೆರೆ

ಕರ್ನಾಟಕ ರಾಜ್ಯ ಪೊಲೀಸ್ , ಜಿಲ್ಲಾ ಪೊಲೀಸ್ ವತಿಯಿಂದ ನವಂಬರ್ 27 ರಿಂದ 29 ರವರೆಗೆ ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ವಾರ್ಷಿಕ ಕ್ರೀಡಾಕೂಟ-2024 ವನ್ನು ಆಯೋಜಿಸಲಾಗಿದೆ. ಕ್ರೀಡಾಕೂಟವನ್ನು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಪೂರ್ವವಲಯದ ಪೊಲೀಸ್ ಉಪಮಹಾ ನಿರೀಕ್ಷಕರಾದ ಬಿ.ರಮೇಶ್ ಭಾಗವಹಿಸುವರು. ನ.29 ರಂದು ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ.

### ಡಿ.3 ರಂದು ವಿಶ್ವ ವಿಕಲಚೇತನರ ದಿನಾಚರಣೆ

» ದಾವಣಗೆರೆ

ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ತುಂಗಭದ್ರ ಸಭಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, , ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್.ಕೆ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಭಾಗವಹಿಸುವರು.

### ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುಕಂಪಿತ ಹುದ್ದೆಗಳಿಗೆ ಅರ್ಜಿ ಸಲ್ಲಿಕೆ ಸಂಪೂರ್ಣ ಆನ್ ಲೈನ್

» ದಾವಣಗೆರೆ

ಅನುಕಂಪದ ನೇಮಕಾತಿ ಅರ್ಜಿಗಳನ್ನು ಸಂಪೂರ್ಣವಾಗಿ ಆನ್ ಲೈ ತಂತ್ರಾಂಶದ ಮುಖಾಂತರ ಇಇಡಿಎಸ್‌ನಲ್ಲಿ ನಿರ್ವಹಿಸುವ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದ್ದು, ಇಲಾಖಾ ವೆಬ್‌ಸೈಟï schooleducation. karnataka.gov.in ಅಳವಡಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ಅಥವಾ ಡಿಡಿಪಿ ರವರನ್ನು ಸಂಪರ್ಕಿಸಿ..

### ನವಂಬರ್ 26 ರಂದು ಸಂವಿಧಾನ ದಿನಾಚರಣೆ


» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ ವತಿಯಿಂದ ನವಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗಾಜಿನ ಮನೆಯಲ್ಲಿ ಸಂವಿಧಾನ ದಿನ ಆಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್.ಕೆ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಪಾಲಿಕೆ ಆಯುಕ್ತರಾದ ರೇಣುಕಾ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಕೆ.ನಾಗರಾಜ ಭಾಗವಹಿಸುವರು.

# ಮಕ್ಕಳ ಕೈಯಲ್ಲಿ ಮೊಬೈಲ್ ಬದಲು ಪುಸ್ತಕ ಕೊಡಿ

» ಚಿತ್ರದುರ್ಗ

ಮಕ್ಕಳನ್ನು ಚಿಕ್ಕ ವಯಸ್ಸಿನಲ್ಲಿಯೇ ಮಠಗಳು, ಮಂದಿರಗಳಿಗೆ ಕರೆದುಕೊಂಡು ಹೋಗುವ ಅಭ್ಯಾಸವನ್ನು ಮಾಡಿದಾಗ ಅವರು ಸಂಸ್ಕಾರವನ್ನು ಕಲಿಯಲು ಸಹಾಯವಾಗುತ್ತದೆ ಎಂದು ಶಾರದಾ ರಾಮಕೃಷ್ಣಆಶ್ರಮದಕಾರ್ಯದರ್ಶಿಗಳಾದ ಶ್ರೀ ಸ್ವಾಮಿ ಬ್ರಹ್ಮನಿಷ್ಠಾನಂದಜೀ ತಿಳಿಸಿದರು.



ಚಿತ್ರದುರ್ಗ ನಗರದ ಕಬೀರಾನಂದ ನಗರದ ಶ್ರೀ ಗುರು ಕಬೀರಾನಂದ ಆಶ್ರಮದವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಶ್ರೀ ಸದ್ಗುರು ಕಬೀರಾನಂದ ಮಹಾಸ್ವಾಮಿಗಳವರ 68ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಮಹಾಸ್ವಾಮಿಗಳವರ 58ನೇ ಪುಣ್ಯಾರಾಧನೆ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಶ್ರೀಗಳು, ಮಾನವನಾದನಿಗೆ ಹಿಂದೆ ಗುರು ಇದ್ದು ಮುಂದೆ ಗುರಿ ಇದ್ದಾಗ ಮಾತ್ರ ಸರಿಯಾದ ದಾರಿಯಲ್ಲಿ ಸಾಗಲು ಸಾಧ್ಯವಿದೆ, ಇವೆರಡು ಇಲ್ಲದಿದಾಗ ಮಾನವ ದಾರಿಯನ್ನು ತಪ್ಪುತ್ತಾನೆ, ಮಕ್ಕಳು ಚಿಕ್ಕ ವಯಸ್ಸಿನಲ್ಲಿ ಇದ್ದಾಗಲೇ ಅವರಿಗೆ ಮಠ, ಆಶ್ರಮ, ದೇವಾಲಯಗಳನ್ನು ತೋರಿಸುವ ಕಾರ್ಯವನ್ನು ಪೋಷಕರಾದವರು ಮಾಡಬೇಕಿದೆ ಇದರಿಂದ ಅವರಿಗೆ ಮುಂದೆ ಉತ್ತಮವಾಗಲಿದೆ, ಚನ್ನಾಗಿ ಸಂಸ್ಕಾರವನ್ನು ಕಲಿಯಲು ಸಾಧ್ಯವಾಗುತ್ತದೆ ಗುರುಗಳಲ್ಲಿ ಭಕ್ತಿ ಮೂಡುತ್ತದೆ ಎಂದರು.

ಮಕ್ಕಳ ಕೈಯಲ್ಲಿ ಮೊಬೈಲ್ ಕೊಡಬೇಡಿ ಅದರ ಬದಲಿಗೆ ಪುಸ್ತಕವನ್ನು ಅದನ್ನು ಓದುವುದರಿಂದ ಜ್ಞಾನ ಹೆಚ್ಚಾಗುತ್ತದೆ. ಇದರಿಂದ ಮುಂದೆ ಉಪಯೋಗವಾಗಲಿದೆ. ಇದ್ದಲ್ಲದೆ ಉತ್ತಮ ವ್ಯಕ್ತಿಗಳಾಗಲು ಸಹಾ ಸಾಧ್ಯವಿದೆ. ಇಂತಹ ಕಾರ್ಯಕ್ರಮಗಳನ್ನು ತಮ್ಮ ಮಕ್ಕಳನ್ನು ಕರೆತರುವುದರಿಂದ ಗುರುಗಳ ಸಾನೀಧ್ಯ ದೂರಕುತ್ತದೆ, ಅವರ ಅಮೃತವಾಣಿಯನ್ನು ಕೇಳುವುದರಿಂದ ಜೀವನ ಪಾವನವಾಗುತ್ತದೆ. ಮನೆಯಲ್ಲಿ ತಂದೆ-ತಾಯಿಗಳನ್ನು ಚನ್ನಾಗಿ ನೋಡಿಕೊಳ್ಳಿ ಅವರಿಗೆ ಯಾವುದೇ ತೊಂದರೆಯನ್ನು ನೀಡಬೇಡಿ ಎಂದು ಮನವಿ ಮಾಡಿದರು.

ಸಮಾರೋಪ ಸಮಾರಂಭದ ಸಾನಿಧ್ಯವನ್ನು ವಹಿಸಿದ್ದ ಶ್ರೀ ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು ಮಾತನಾಡಿ, ಮಾನವನಾದನಿಗೆ ಪುತ್ರೇಶ, ವಿತ್ತೇಶ ಹಾಗೂ ಲೋಕೇಶನನ್ನು ಬಿಟ್ಟವನು ಜೀವನದಲ್ಲಿ ದೂಡ್ಡವನಾಗಲೂ ಸಾಧ್ಯವಿದೆ. ಕಬೀರಾನಂದರ ಆರ್ಶೀವಾದವನ್ನು ಪಡೆದವನು ಜೀವನದಲ್ಲ ಸನ್ಮಾರ್ಗವನ್ನು ಕಾಣುತ್ತಾನೆ, ಪೋಷಕರಲ್ಲಿ ಸಂಸ್ಕಾರ ಇದ್ದರೆ ಅದು ಮಕ್ಕಳಲ್ಲಿ ಬರಲು ಸಾಧ್ಯವಿದೆ, ಈ ಹಿನ್ನಲೆಯಲ್ಲಿ ಮೊದಲು ಪೋಷಕರಾದವರು ಸಂಸ್ಕಾರವಂತರಾಗಬೇಕಿದೆ. ಓದುವ ಹವ್ಯಾಸವನ್ನು ಬೆಳಸಿಕೊಳ್ಳಿ ಇದರಿಂದ ನಿಮ್ಮ ಜೀವನ ಪಾವನವಾಗುತ್ತದೆ. ಕಬೀರಾನಂದ ಶ್ರೀಗಳು ಗುರುವಿನ ಆಣತಿಯಂತೆ ಚಿತ್ರದುರ್ಗಕ್ಕೆ ಬಂದು ಗೋಶಾಲೆಯನ್ನು ತೆರೆಯುವುದರ ಮೂಲಕ ಗೋಸಂರಕ್ಷಣೆಯನ್ನು ಮಾಡಿದರು ಎಂದರು.

ಜಿ.ಪಂ.ನಿವೃತ್ತ ವ್ಯವಸ್ಥಾಪಕರಾದ ನಾಗರಾಜ್ ಸಂಗಂ ಮಾತನಾಡಿ, ಗುರುವಿಗೆ ಶರಣಾದಾಗ ಮಾತ್ರ ಮುಕ್ತಿ ಸಿಗಲು ಸಾಧ್ಯವಿದೆ. ಗುರುವಿನ ಚರಿತೆಯನ್ನು ಎಲ್ಲರು ತಿಳಿಯಬೇಕಿದೆ, ಆಗ ಮಾತ್ರ ಗುರುವಿನ ಸಾನೀಧ್ಯ ದೂರಕಲು ಸಾಧ್ಯವಿದೆ. ಇಂದಿನ ದಿನಮಾನದಲ್ಲಿ ವೃದ್ದಾಶ್ರಮಗಳ ಸಂಖ್ಯೆ ಹೆಚ್ಚಾಗುತ್ತಿರುವುದು ನೋವಿನ ಸಂಗತಿಯಾಗಿದೆ, ಮನೆಯಲ್ಲಿಯೇ ವೃದ್ದರನ್ನು ಚನ್ನಾಗಿ ನೋಡಿಕೊಳ್ಳುವ ಕಾರ್ಯವಾಗಬೇಕಿದೆ. ಮನೆಯಲ್ಲಿ ಅತ್ತೇ-ಸೊಸೆಯ ವೈರತ್ವ ಕಡಿಮೆಯಾದಾಗ ಮಾತ್ರ ಇಂತಹ ವೃದ್ದಾಶ್ರಮಗಳ ಸಂಖ್ಯೆ ಕಡಿಮೆಯಾಗಲು ಸಾಧ್ಯವಿದೆ ಎಂದರು.

ಕೆಡಿಪಿ ಸದಸ್ಯರಾದ ಕೆ.ಸಿ.ನಾಗರಾಜು ಮಾತನಾಡಿದರು. ನಗರಸಭಾ ಸದಸ್ಯರಾದ ವೆಂಕಟೇಶ್, ವೀರಶೈವ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯ ನಿರ್ದೇಶಕರಾದ ಸಿದ್ದವ್ವನಹಳ್ಳಿ ಪರಮೇಶ್ ನಿವೃತ್ತ ಜಿಲ್ಲಾಧಿಕಾರಿಗಳಾದ ಭೀಮಯ್ಯ ಗಣಪತಿ ಶಾಸ್ತ್ರಿ, ನಿರಂಜನ ಮೂರ್ತಿ ತಿಪ್ಪೇಸ್ವಾಮಿ ಭಾಗವಹಿಸಿದ್ದರು. ಸಾಹಿತಿಗಳಾದ ಹುರಳಿ ಬಸವರಾಜು ಉಪನ್ಯಾಸ ನೀಡಿದರು.

ಸಮಾರೋಪ ಸಮಾರಂಭದ ಸಾನಿಧ್ಯವನ್ನು ಶ್ರೀ ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು ವಹಿಸಲಿದ್ದಾರೆ. ಶಾರದಾ ರಾಮಕೃಷ್ಣ ಆಶ್ರಮದ ಕಾರ್ಯದರ್ಶಿಗಳಾದ ಶ್ರೀ ಸ್ವಾಮಿ ಬ್ರಹ್ಮನಿಷ್ಠಾನಂದಜೀ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ನಿವೃತ್ತ ಕಾಲೇಜು ಶಿಕ್ಷಣ ನಿರ್ದೇಶಕರಾದ ಶ್ರೀಮತಿ ಡಾ.ಕಮಲಮ್ಮ ಹಾಗೂ ಚಿತ್ರದುರ್ಗ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಡಾ.ವಿ.ಎಲ್,ಪ್ರಶಾಂತ್‌ರವರನ್ನು ಸನ್ಮಾನಿಸಲಾಯಿತು.

ಶ್ರೀ ಸದ್ಗುರು ಕಬೀರಾನಂದ ಮಹಾಸ್ವಾಮಿಗಳವರ 68ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಮಹಾಸ್ವಾಮಿಗಳವರ 58ನೇ ಪುಣ್ಯಾರಾಧನೆಯ ಅಂಗವಾಗಿ ನ. 18 ರಿಂದ 23 ರವರೆಗೆ ಆರೂಢ ಮೇರು ಜೀವನ ಚರಿತ್ರೆ ಪಾರಾಯಣ ಪ್ರವಚನ ನಡೆದಿದ್ದು, ಬೆಳಿಗ್ಗೆ ಬ್ರಾಹ್ಮೀ ಮಹೂರ್ತದಲ್ಲಿ ಶ್ರೀ ಕರ್ತೃ ಗದ್ದುಗೆಗೆ ರುದ್ರಾಭಿಷೇಕ ನಡೆದಿದ್ದು ಸಂಜೆ ಮಹಾ ಮಂಗಳಾರತಿ ನಡೆಯಿತು.

ಸುಬ್ರಯಾಭಟ್ಟರು ವೇದ ಘೋಷಗಳನ್ನು ಮಾಡಿದರೆ ಶಿಕ್ಷಕಿ ಶ್ರೀಮತಿ ಜ್ಯೋತಿ ಪ್ರಾರ್ಥಿಸಿದರು ತಿಪ್ಪೇಸ್ವಾಮಿ ಸ್ವಾಗತಿಸಿದರು, ಮುರುಗೇಶ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಅಂತರ್ ಜಿಲ್ಲಾ ಟೆನ್ನಿಸ್‌ಬಾಲ್ ಕ್ರಿಕೆಟ್: ಟ್ರೋಫಿ ಗೆದ್ದ ಚಿತ್ರದುರ್ಗ ವಕೀಲರ ತಂಡ

» ಚಿತ್ರದುರ್ಗ

ಹರಿಹರದಲ್ಲಿ ನ.23 ಮತ್ತು 24 ರಂದು ನಡೆದ ಅಂತರ್ ಜಿಲ್ಲಾ ಮಟ್ಟದ ಟೆನ್ನಿಸ್‌ಬಾಲ್ ಕ್ರಿಕೆಟ್ ಟೂರ್ನಿಯಲ್ಲಿ ಭಾಗವಹಿಸಿ ಟ್ರೋಫಿ ಗೆದ್ದ ಚಿತ್ರದುರ್ಗ ವಕೀಲರ ತಂಡ ವಕೀಲರ ಭವನದಲ್ಲಿ ಸೋಮವಾರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಿಗೆ ಟ್ರೋಪಿಯನ್ನು ಸಮರ್ಪಿಸಿತು.



ಟ್ರೋಫಿ ಸ್ವೀಕರಿಸಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ವಕೀಲರುಗಳಲ್ಲಿ ಕ್ರೀಡಾ ಮನೋಭಾವ ಇಮ್ಮಡಿಯಾಗಬೇಕು. ಹರಿಹರದಲ್ಲಿ ನಡೆದ ಟೆನ್ನಿಸ್‌ಬಾಲ್ ಕ್ರಿಕೆಟ್ ಟೂರ್ನಿಯಲ್ಲಿ ನಮ್ಮ ವಕೀಲರು ಟ್ರೋಫಿ ಗೆದ್ದಿರುವುದು ಅತ್ಯಂತ ಸಂತೋಷವಾಗಿದೆ. ಮುಂದಿನ ದಿನಗಳಲ್ಲಿ ಚಿತ್ರದುರ್ಗದಲ್ಲಿ ಅಂತರ್ ಜಿಲ್ಲಾ ಕ್ರಿಕೆಟ್ ಟೂರ್ನಿ ನಡೆಸುವ ಚಿಂತನೆಯಿದೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಬೇಕೆಂದು ವಕೀಲರುಗಳಲ್ಲಿ ವಿನಂತಿಸಿದರು.

ಹಿರಿಯ ನ್ಯಾಯವಾದಿ ಎಚ್.ಎಂ.ಎಸ್.ನಾಯಕ ಮಾತನಾಡುತ್ತ ನಮ್ಮ ವಕೀಲರು ಟ್ರೋಫಿ ತರುವ ಮೂಲಕ ವಕೀಲರ ಸಂಘಕ್ಕೆ ಗೌರವ ತಂದುಕೊಟ್ಟಿರುವುದು ನಿಜಕ್ಕೂ ಹೆಮ್ಮೆಯ ಸಂಗತಿ. ಕ್ರೀಡೆಯಲ್ಲಿ ಸೋಲು-ಗೆಲುವಿಗಿಂತ ಚಾಣಾಕ್ಷತನ ಮುಖ್ಯ. ಸೋಲಿನಿಂದ ಗೆಲ್ಲಬೇಕೆಂಬ ಸ್ಫೂರ್ತಿ ಹೆಚ್ಚಾಗುತ್ತದೆ ಎಂದು ಹೇಳಿದರು.

ನ್ಯಾಯವಾದಿ ರಿಜ್ವಾನ್ ಮಾತನಾಡಿ ವಕೀಲರ ಸಂಘ ಹರಿಹರದಲ್ಲಿ ನಡೆದ ಟೂರ್ನಿಯಲ್ಲಿ ಟ್ರೋಫಿ ಗೆದ್ದಿರುವುದು ಸಂತಸವಾಗಿದೆ. ಚಿತ್ರದುರ್ಗದಲ್ಲಿ ಅಂತರ್ ಜಿಲ್ಲಾ ಟೂರ್ನಮೆಂಟ್ ನಡೆಸಿ ಎಂದು ವಕೀಲರ ಸಂಘಕ್ಕೆ ಸಲಹೆ ನೀಡಿದರು.

ವಕೀಲರ ಸಂಘದ ಮಾಜಿ ಅಧ್ಯಕ್ಷ ಎಸ್.ವಿಜಯಕುಮಾರ್ ಮಾತನಾಡುತ್ತ ಟ್ರೋಫಿಗೆ ಅತ್ಯಂತ ಮೌಲ್ಯವಿದೆ. 2001 ರಿಂದ ಪ್ರಯತ್ನ ಮಾಡುತ್ತಿದ್ದೆವು. ಆಗಿರಲಿಲ್ಲ.

ಚಿತ್ರದುರ್ಗ, ಶಿವಮೊಗ್ಗ, ಬಳ್ಳಾರಿ, ದಾವಣಗೆರೆ, ತುಮಕೂರು ಜಿಲ್ಲೆಗಳ ಅಂತರ್ ಜಿಲ್ಲಾ ಕ್ರಿಕೆಟ್ ಟೂರ್ನಿಯನ್ನು ಚಿತ್ರದುರ್ಗದಲ್ಲಿ ನಡೆಸೋಣ. ಪ್ರತಿನಿತ್ಯ ಅಭ್ಯಾಸದೊಂದಿಗೆ ಸತತ ಪ್ರಯತ್ನದಿಂದ ಮಾತ್ರ ಗೆಲುವು ಸಾಧಿಸಬಹುದೆಂದು ಹೇಳಿದರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್ ಮಾತನಾಡಿ ಗೆಲುವಿಗಿಂತ ಪಂದ್ಯದಲ್ಲಿ ಭಾಗವಹಿಸುವಿಕೆ ಮುಖ್ಯ. ನಮ್ಮ ವಕೀಲರ ಸಂಘದಿಂದಲೂ ಮುಂದಿನ ದಿನಗಳಲ್ಲಿ ಅಂತರ್ ಜಿಲ್ಲಾ ಕ್ರಿಕೆಟ್ ಪಂದ್ಯ ನಡೆಯಲಿ ಎಂದು ಆಶಿಸಿದರು.

ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್‌ಕುಮಾರ್, ವಕೀಲರುಗಳಾದ ಹನುಮಂತಪ್ಪ, ಮೂರ್ತಿ, ಲೋಕೇಶ್, ಪಿ.ಆರ್.ವೀರೇಶ್, ಅಶೋಕ್, ಶಿವಕುಮಾರ್ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

## ಶಿಕ್ಷಣದಿಂದ ಆರ್ಥಿಕ ಸಮಾನತೆ ಹೆಚ್ಚುತ್ತದೆ: ಬಿಇಓ ಹೆಚ್.ಶ್ರೀನಿವಾಸ್



» ಚಿತ್ರದುರ್ಗ

ಶಿಕ್ಷಣದಿಂದ ಆರ್ಥಿಕ ಸಮಾನತೆ ಹೆಚ್ಚುತ್ತದೆ ಶಿಕ್ಷಣವು ಜೀವನದ ಗುರಿ ಬದಲಾಯಿಸುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಹೆಚ್ ಶ್ರೀನಿವಾಸ್ ತಿಳಿಸಿದರು.ಚಿತ್ರದುರ್ಗ ತಾಲ್ಲೂಕಿನ ಗೂಳಯ್ಯನಹಟ್ಟಿಯ ಮುರಾರ್ಜಿ ದೇಸಾಯಿ ವಸತಿ ಶಾಲೆ ಹಳೆಯ ವಿದ್ಯಾರ್ಥಿಗಳಿಂದ ಭಾನುವಾರ ನಡೆದ ಗುರುವಂದನ ಕಾರ್ಯಕ್ರಮ ಹಾಗೂ ಬೆಳ್ಳಿ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಶಿಕ್ಷಣದಿಂದ ಆರ್ಥಿಕ ಸಮಾನತೆ ಹೆಚ್ಚುತ್ತದೆ ಶಿಕ್ಷಣವು ಜೀವನದ ಗುರಿ ಬದಲಾಯಿಸುತ್ತದೆ ಶಿಕ್ಷಣದಿಂದ ವ್ಯಕ್ತಿತ್ವ ಸಾಮಾಜಿಕ ನಾಯಕತ್ವ ಬೌದ್ಧಿಕ ವಿಕಾಸನದ ಜೊತೆ ಸ್ಥಿತಿ ಗತಿ ಉತ್ತಮಗೊಳ್ಳಲು ಸಹಕಾರಿಯಾಗಿದೆ. 25 ವರ್ಷಗಳಿಂದ ಈ ಶಾಲೆಯು ಉತ್ತಮ ಶಿಕ್ಷಣ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಕಷ್ಟು ಶ್ರಮವಹಿದ್ದಾರೆ. ಶಾಲೆಯಲ್ಲಿ ಕಾರ್ಯನಿರ್ವಹಿಸಿದ ಎಲ್ಲಾ ಶಿಕ್ಷಕ ಮಿತ್ರರು ಮತ್ತು ಸಿಬ್ಬಂದಿಗಳು ಉತ್ತಮ ಸೇವೆ ಸಲ್ಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಹಾರೈಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಜುನಾಥ್ ರೆಡ್ಡಿ ಪ್ರಾಂಶುಪಾಲರು ವಹಿಸಿ ಹಳೆಯ ವಿದ್ಯಾರ್ಥಿಗಳ ಸಂಘಕ್ಕೆ ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಹೊಳಲ್ಕೆರೆಯ ಕ್ಷೇತ್ರ ಸಮನ್ವಯಧಿಕಾರಿ ಎಸ್ . ಸುರೇಂದ್ರನಾಥ್. ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಶಕುಂತಲಾ.ಹಿರಿಯ ಶಿಕ್ಷಕರುಗಳಾದ ಎಸ್ ಟಿ ಮಾಲಿಂಗಪ್ಪ . ನಾಗರಾಜ್. ಶೇಖರ್. ಹಿರಿಯ ವಿದ್ಯಾರ್ಥಿಗಳಾದ ಭಾನುಮೂರ್ತಿ ಯತೀಶ್. ಮಧು. ನವೀನ್ . ಆದರ್ಶ. ಬಸವರಾಜ್. ಅರವಿಂದ್. ಇನ್ನು ಅನೇಕ ಹಳೆಯ ವಿದ್ಯಾರ್ಥಿಗಳು ಹಾಗೂ ಮಕ್ಕಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ನನ್ನ ಈ ಎತ್ತರಕ್ಕೆ ಸದ್ಗುರು ಕಬೀರಾನಂದ ಶ್ರೀ ಕಾರುಣ್ಯ ಕಾರಣ

» ಚಿತ್ರದುರ್ಗ

ನನ್ನ ಈ ಎತ್ತರಕ್ಕೆ ಸದ್ಗುರು ಕಬೀರಾನಂದ ಶ್ರೀಗಳು ಕಾರುಣ್ಯ ಕಾರಣವಾಗಿದೆ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ನಿವೃತ್ತ ಕಾಲೇಜು ಶಿಕ್ಷಣ ನಿರ್ದೇಶಕರಾದ ಶ್ರೀಮತಿ ಡಾ.ಕಮಲಮ್ಮ ತಿಳಿಸಿದರು.



ಚಿತ್ರದುರ್ಗ ನಗರದ ಕಬೀರಾನಂದ ನಗರದ ಶ್ರೀ ಗುರು ಕಬೀರಾನಂದ ಆಶ್ರಮದವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಶ್ರೀ ಸದ್ಗುರು ಕಬೀರಾನಂದ ಮಹಾಸ್ವಾಮಿಗಳವರ 68ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಮಹಾಸ್ವಾಮಿಗಳವರ 58ನೇ ಪುಣ್ಯಾರಾಧನೆ ಸಮಾರೋಪ ಸಮಾರಂಭದಲ್ಲಿ ಶ್ರೀಮಠದಿಂದ ನೀಡಿದ ಸನ್ಮಾನವನ್ನು ಸ್ವೀಕಾರ ಮಾಡಿ ಮಾತನಾಡಿ ಅವರು ನಾನು ಮೂಲತ ಚಿತ್ರದುರ್ಗದವಳು ನನ್ನ ಮನೆಯೂ ಸಹಾ ಮಠದ ಬಳಿಯಲ್ಲಿಯೇ ಇತ್ತು ನಮ್ಮ ತಂದೆಯವರಿಗೆ ಐದು ಜನ ಹೆಣ್ಣು ಮಕ್ಕಳು ಇವರ ವಿದ್ಯಾಭ್ಯಾಸಕ್ಕೆ ಶ್ರೀ ಮಠ ಸಹಾಯವನ್ನು ಮಾಡಿದೆ. ಇಲ್ಲಿನ ಕಬೀರಾನಂದಶ್ರೀಗಳು ನಮ್ಮ ವಿದ್ಯಾಭ್ಯಾಸಕ್ಕೆ ಸಹಾಯವನ್ನು ಮಾಡಿದ್ದಲ್ಲದೆ ರಾತ್ರಿ ಸಮಯದಲ್ಲಿ ನಮಗೆ ಓದಲು ಟೀಯನ್ನು ಮಾಡಿಕೊಂಡುವುದರ ಮೂಲಕ ಸಹಾಯವನ್ನು ಮಾಡಿದ್ದರು ಎಂದು ನೆನೆಪಿಕೊಂಡರು.

ನಾನು ಇಷ್ಟರ ಮಟ್ಟಗೆ ಬೆಳೆಯಲು ಶ್ರೀಮಠ ಸಹಾಯವಾಗಿದೆ ನನ್ನ ಬೆಳವಣಿಗೆ ಹಂತ ಹಂತವಾಗಿ ಏರಿಕೆಯನ್ನು ಕಂಡಿದ್ದು, ಉನ್ನತವಾದ ಸ್ಥಾನವನ್ನು ಪಡೆಯಲು ಸಹಾಯವಾಯಿತು. 2012ರಲ್ಲಿ ಸರ್ಕಾರಿ ಕೆಲಸದಿಂದ ನಿವೃತ್ತಿಯಾದ ಮೇಲೆ ನನ್ನ ಸೇವೆಯನ್ನು ಕಂಡು ಈ ಸಾಲಿನಲ್ಲಿ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿದೆ. ಇದನ್ನು ಮನಗಂಡು ನನಗೆ ಶ್ರೀಮಠದಲ್ಲಿ ಸನ್ಮಾನ ಮಾಡಿದ್ದು ನನಗೆ ತವರು ಮನೆಯಲ್ಲಿ ಸಿಕ್ಕ ಸನ್ಮಾನದಷ್ಟು ಸಂತೋಷವಾಗಿದೆ. ಎಂದ ಅವರು ನಾವು ಪ್ರಗತಿಯನ್ನು ಕಾಣಬೇಕಾದರೆ ಗುರುವಿನ ದಯೆ ಇಲ್ಲದೆ ಏನನ್ನು ಸಾಧಿಸಲು ಸಾಧ್ಯವಿಲ್ಲ ಈ ಹಿನ್ನಲೆಯಲ್ಲಿ ಗುರುವಿನ ಕಾರುಣ್ಯವನ್ನು ಪಡೆದಾಗ ಮಾತ್ರ ನಮ್ಮ ಬದುಕು ಉತ್ತಮಗೊಳ್ಳಲು ಸಾಧ್ಯವಿದೆ ಎಂದರು.

ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ಕೊಡಿಸಿ, ಅದು ನಮನ್ನು ಎತ್ತರಕ್ಕೆ ಕರೆದುಕೊಂಡು ಹೋಗಲು ಸಾಧ್ಯವಾಗುತ್ತದೆ. ಶಿಕ್ಷಣದಿಂದ ಜ್ಞಾನವನ್ನು ಸಂಪಾದಿಸಲು ಸಾಧ್ಯವಿದೆ. ಇದರಿಂದ ಉತ್ತಮ ಪ್ರಜೆಗಳನ್ನಾಗಿ ರೂಪುಗೊಳ್ಳಲು ಸಾಧ್ಯವಿದೆ. ಶಿಕ್ಷಣದಿಂದ ದೂರ ಇಡಬೇಡಿ, ನನ್ನ ಈ ಎತ್ತರಕ್ಕೆ ಶಿಕ್ಷಣವೂ ಸಹಾ ಸಹಾಯವಾಗಿದೆ ಎಂದು ಕಮ್ಮಲಮ್ಮ ತಿಳಿಸಿದರು.

ಶ್ರೀಮಠದ ಸನ್ಮಾನಕ್ಕೆ ಪಾತ್ರರಾದ ಮತ್ತೋರ್ವರಾದ ಚಿತ್ರದುರ್ಗ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಡಾ.ವಿ.ಎಲ್,ಪ್ರಶಾಂತ್ ಮಾತನಾಡಿ, ಇಂದಿನ ದಿನಮಾನದಲ್ಲಿ ಓದುವವರ ಸಂಖ್ಯೆ ಕಡಿಮೆಯಾಗಿ ಮೊಬೈಲ್ ನೋಡುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇದರಿಂದ ನಮ್ಮ ಮುಂದಿನ ಪೀಳಿಗೆಗೆ ಏನನ್ನು ನೀಡಬೇಕೆ ಎನ್ನುವುದು ಪ್ರಶ್ನೆಯಾಗಿದೆ. ಪುಸ್ತಕದಲ್ಲಿರುವುದು ಮಸ್ತಕದ್ದಾಗ ಮಾತ್ರ ಬೇರೆಯವರಿಗೆ ತಿಳಿಸಲು ಸಾಧ್ಯವಿದೆ. ನಮಗೆ ಕಷ್ಟ ಕಾಲದಲ್ಲಿ ಕಬೀರಾನಂದಜ್ಜರವರ ಸ್ಮರಣೆಯನ್ನು ಮಾಡುವುದರ ಮೂಲಕ ನಮಗೆ ಬಂದ ಎಲ್ಲಾ ಕಷ್ಟಗಳು ಪರಿಹಾರವಾಗುತ್ತವೆ, ಮಕ್ಕಳನ್ನು ಚಿಕ್ಕ ವಯಸ್ಸಿನಿಂದಲೇ ಮಠ, ದೇವಾಲಯಗಳಿಗೆ ಕರೆ ತರುವುದರ ಮೂಲಕ ಅವರಿಗೆ ಸಂಸ್ಕಾರವನ್ನು ಕಲಿಸಬೇಕಿದೆ ಎಂದರು.

ಸಾಹಿತಿಗಳಾದ ಹುರಳಿ ಬಸವರಾಜು ಉಪನ್ಯಾಸ ನೀಡುತ್ತಾ, ಕಬೀರಾನಂದ ಶ್ರೀಗಳು ಚಿಕ್ಕ ವಯಸ್ಸಿನಿಂದಲೇ ತನ್ನ ಲೀಲೆಗಳನ್ನು ತೋರಿಸುತ್ತಾ ಹೆಸರನ್ನು ಪಡೆದಿದ್ದರು. ತಮ್ಮ ವಯಸ್ಸಿನಲ್ಲಿಯೇ ವಿವಿಧ ಕಡೆಗಳಲ್ಲಿ ಸಂಚಾರವನ್ನು ಮಾಡುವುದರ ಮೂಲಕ ಹಲವಾರು ವಿಷಯದ ಜ್ಞಾನವನ್ನು ಪಡೆದಿದ್ದರು, ಚಿತ್ರದುರ್ಗಕ್ಕೆ ಬಂದು ಇಲ್ಲಿ ಶ್ರೀಮಠವನ್ನು ಸ್ಥಾಪನೆ ಮಾಡುವುದರ ಮೂಲಕ ಇಲ್ಲಿ ಗೋಶಾಲೆಯನ್ನು ಪ್ರಾರಂಭ ಮಾಡಿ ಗೋವುಗಳನ್ನು ರಕ್ಷಣೆ ಮಾಡಲು ಮುಂದಾದರು, ಇಲ್ಲಿಗೆ ಬರುವಾಗ ಕಸದ ರಾಶಿಯಾಗಿದ್ದ ಈ ಜಾಗವನ್ನು ಸ್ವಚ್ಚ ಮಾಡಿ ಮಠವನ್ನು ನಿರ್ಮಾಣ ಮಾಡಲು ಮುಂದಾದರು ಎಂದರು.ಸಮಾರೋಪ ಸಮಾರಂಭದ ಸಾನಿಧ್ಯವನ್ನು ಶ್ರೀ ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು ವಹಿಸಿದ್ದು, ಶಾರದಾ ರಾಮಕೃಷ್ಣ ಆಶ್ರಮದ ಕಾರ್ಯದರ್ಶಿಗಳಾದ ಶ್ರೀ ಸ್ವಾಮಿ ಬ್ರಹ್ಮನಿಷ್ಠಾನಂದಜೀ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಕೆ.ಸಿ.ನಾಗರಾಜ್, ನಗರಸಭಾ ಸದಸ್ಯರಾದ ವೆಂಕಟೇಶ್, ವೀರಶೈವ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯ ನಿರ್ದೇಶಕರಾದ ಸಿದ್ದವ್ವನಹಳ್ಳಿ ಪರಮೇಶ್, ಜಿ.ಪಂ.ನಿವೃತ್ತ ವ್ಯವಸ್ಥಾಪಕರಾದ ನಾಗರಾಜ್ ಸಂಗಂ ಗಣಪತಿ ಶಾಸ್ತ್ರಿ, ನಿರಂಜನ ಮೂರ್ತಿ ತಿಪ್ಪೇಸ್ವಾಮಿ ಭಾಗವಹಿಸಿದ್ದರು,

ಶ್ರೀ ಸದ್ಗುರು ಕಬೀರಾನಂದ ಮಹಾಸ್ವಾಮಿಗಳವರ 68ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಮಹಾಸ್ವಾಮಿಗಳವರ 58ನೇ ಪುಣ್ಯಾರಾಧನೆಯ ಅಂಗವಾಗಿ ನ. 18 ರಿಂದ 23 ರವರೆಗೆ ಆರೂಢ ಮೇರು ಜೀವನ ಚರಿತ್ರೆ ಪಾರಾಯಣ ಪ್ರವಚನ ನಡೆದಿದ್ದು, ಬೆಳಿಗ್ಗೆ ಬ್ರಾಹ್ಮೀ ಮಹೂರ್ತದಲ್ಲಿ ಶ್ರೀ ಕರ್ತೃ ಗದ್ದುಗೆಗೆ ರುದ್ರಾಭಿಷೇಕ ನಡೆದಿದ್ದು ಸಂಜೆ ಮಹಾ ಮಂಗಳಾರತಿ ನಡೆಯಿತು. ಸುಬ್ರಯಾಭಟ್ಟರು ವೇದ ಘೋಷಗಳನ್ನು ಮಾಡಿದರೆ ಶಿಕ್ಷಕಿ ಶ್ರೀಮತಿ ಜ್ಯೋತಿ ಪ್ರಾರ್ಥಿಸಿದರು ತಿಪ್ಪೇಸ್ವಾಮಿ ಸ್ವಾಗತಿಸಿದರು, ಮುರುಗೇಶ್ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ಫಾಸ್ಟ್ ನ್ಯೂಸ್

### ಪ್ರಾಣಾಪಾಯದಿಂದ ರೋಗಿಗಳನ್ನು ಚಿಕಿತ್ಸೆ ಮೂಲಕ ರಕ್ಷಿಸುವ ವೈದ್ಯರ ಕಾರ್ಯಪುಣ್ಯಕಾರ್ಯ



» **ಚಳ್ಳಕೆರೆ**

ಬೆಂಗಳೂರಿನ ಜಯದೇವ ಹೃದ್ರೋಗ ಚಿಕಿತ್ಸಾ ಕೇಂದ್ರದ ನೂತನ ನಿರ್ದೇಶಕರಾಗಿ ಆಯ್ಕೆಯಾದ ಡಾ.ರವೀಂದ್ರನಾಥರವರನ್ನು ಬೆಂಗಳೂರಿನ ಆಸ್ಪತ್ರೆಯಲ್ಲಿ ಚಳ್ಳಕೆರೆ ತಾಲ್ಲೂಕು ಎಲ್‌ಐಸಿ ದುಗ್ಗಾವರ ರಂಗಸ್ವಾಮಿ ಅಭಿಮಾನಿ ಬಳಗ ಸನ್ಮಾನಿಸಿ ಅಭಿನಂದಿಸಿದರು. ಬಳಗದ ಅಧ್ಯಕ್ಷ ರಂಗಸ್ವಾಮಿ ಮಾತನಾಡಿ, ಡಾ.ರವೀಂದ್ರನಾಥ ಕಳೆದ ಹಲವಾರು ದಶಕಗಳಿಂದ ವೈದ್ಯಕೀಯ ಸೇವೆಯಲ್ಲಿ ತಮ್ಮದೇಯಾದ ಖ್ಯಾತಿಯನ್ನುಗಳಿಸಿದ್ದಾರೆ. ಆಸ್ಪತ್ರೆಗೆ ಬರುವ ರೋಗಿಗಳಿಗೆ ಸಕರಾತ್ಮಕ ಚಿಕಿತ್ಸೆ ನೀಡುವ ಮೂಲಕ ಅವರಿಗೆ ಜೀವದಾನ ಮಾಡಿದ್ದಾರೆ. ಅವರ ಮಾಡಿದ ಪುಣ್ಯದ ಕೆಲಸದ ಫಲವಾಗಿ ನಿರ್ದೇಶಕರಾಗಿ ಆಯ್ಕೆಯಾಗಿದ್ದು, ಅವರ ಸೇವೆ ಹೀಗೆ ಮುಂದುವರೆಯಲಿ ಎಂದು ಆಶಿಸುವುದಾಗಿ ತಿಳಿಸಿದರು. ಅಭಿನಂದನೆ ಸ್ವೀಕರಿಸಿ ಮಾತನಾಡಿದ ನಿರ್ದೇಶಕ ಡಾ.ರವೀಂದ್ರನಾಥ ಯಾವುದೇ ವೈದ್ಯರಿರಲಿ ತಮ್ಮ ಪಾಲಿನ ಕರ್ತವ್ಯವನ್ನು ಪ್ರಾಮಾಣಿಕತೆಯಿಂದ ಮಾಡಬೇಕು. ಪ್ರತಿಯೊಬ್ಬ ವೈದ್ಯನು ರೋಗಿಯ ಜೀವ ಸಂರಕ್ಷಿಸುವ ಕಾರ್ಯವನ್ನುನಿರಂತರ ಮಾಡುತ್ತಾ ಬಂದಿದ್ದಾನೆ. ವೈದ್ಯಕೀಯ ಕ್ಷೇತ್ರದಲ್ಲಿ ವೈದ್ಯರಿಂದ ರೋಗಿಗಳಿಗೆ ತೊಂದರೆಯಾಗುವ ಸಂಭವ ಬಹಳ ಕಡಿಮೆ. ನನ್ನ ಪಾಲಿನ ಕರ್ತವ್ಯವನ್ನು ನಾನು ಮಾಡಿದ್ದು, ನನ್ನ ಸೇವೆಯನ್ನು ಗುರುತಿಸಿ ಸನ್ಮಾನಿಸಿದ್ದು ಸಂತಸ ತಂದಿದೆ. ಆಸ್ಪತ್ರೆಗೆ ಬರುವ ರೋಗಿಗಳನ್ನು ಸೌಜನ್ಯ, ಸಹನೆಯಿಂದ ಮಾತನಾಡಿಸುವ ಮೂಲಕ ಅವರ ಎಷ್ಟೋ ಕಾಯಿಲೆಗಳಿಗೆ ಪರಿಹಾರ ದೊರೆತಂತಾಗುತ್ತದೆ. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಆಸ್ಪತ್ರೆಯಲ್ಲಿ ಚಿಕಿತ್ಸೆಯ ಜೊತೆಗೆ ಉತ್ತಮ ಪರಿಸರವನ್ನು ನಿರ್ಮಿಸುವ ಜವಾಬ್ದಾರಿ ವೈದ್ಯರದ್ದು ಎಂದರು.

### ಅರ್ಜಿ ಅಹ್ವಾನ

» **ದಾವಣಗೆರೆ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆಗಳು ಒಂದಾಗಿ ಕರ್ನಾಟಕದಲ್ಲಿರುವ ಕನ್ನಡ ಬಾರದ ಎಲ್ಲ ಸರ್ಕಾರಿ ನೌಕರರಿಗಾಗಿ 12 ತಿಂಗಳುಗಳ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಯನ್ನು ನಡೆಸುತ್ತಿದ್ದು, ರಾಜ್ಯದ ಎಲ್ಲ ನಗರಸಭೆ, ಕವಿಪ್ರನಿನಿ, ಕೆಎಸ್ಸಾರ್ಟಿಸಿ, ವಿಶ್ವವಿದ್ಯಾಲಯಗಳು, ಶಾಲಾ ಕಾಲೇಜುಗಳು ಮತ್ತಿತರ ಸರ್ಕಾರಿ ಅನುದಾನ ಪಡೆಯುವ ಸಂಸ್ಥೆಗಳ ನೌಕರರು ಮತ್ತು ಎಲ್ಲ ರಾಷ್ಟ್ರೀಕೃತ ಬ್ಯಾಂಕುಗಳ ನೌಕರರು ಸಹ ಹೆಸರು ನೋಂದಾಯಿಸಿಕೊಳ್ಳಬಹುದು. ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ಹೆಸರು ನೋಂದಾಯಿಸಿಕೊಂಡು ಉತ್ತೀರ್ಣರಾದವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಕನ್ನಡ ಪರೀಕ್ಷೆಯಿಂದ ಸರ್ಕಾರದ ಅಧಿಸೂಚನೆಯಂತೆ ವಿನಾಯಿತಿ ಇರುತ್ತದೆ. ಈ ಯೋಜನೆಯನ್ನು ಸಾರ್ವಜನಿಕರಿಗೂ ವಿಸ್ತರಿಸಲಾಗಿದ್ದು, ಎಸೆಸೆಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ, 18 ರಿಂದ 60 ವರ್ಷದೊಳಗಿನ ಆಸಕ್ತರು ಅರ್ಜಿ ಭರ್ತಿ ಮಾಡಿ ಜೊತೆಯಲ್ಲಿ 250 ರೂ. ಡಿಮ್ಯಾಂಡ್ ಡ್ರಾಫ್ಟನ್ನು ಕಳುಹಿಸಿಕೊಡಬೇಕು. ನೋಂದಣಿತರಿಗೆ ಇಪ್ಪತ್ತು ಪಾಠಾವಳಿಗಳನ್ನು ಕಳುಹಿಸಿಕೊಡಲಾಗುತ್ತದೆ. ತರಬೇತಿ ಮತ್ತು ಸಂಪರ್ಕ ಶಿಬಿರದ ಕೊನೆಯಲ್ಲಿ ಪರೀಕ್ಷೆಗಳನ್ನುನಡೆಸಲಾಗುತ್ತದೆ. ಮೂವತ್ತೆಂಟನೆಯ ತಂಡದ ತರಬೇತಿಯು ಆರಂಭವಾಗಲಿದ್ದು. ಅರ್ಜಿ ನಮೂನೆಯನ್ನು ಪ್ರಭಾರ ಅಧಿಕಾರಿ, ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ, ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ಮಾನಸಗಂಗೋತ್ರಿ ಇವರಿಗೆ 5 ರೂಪಾಯಿ ಅಂಚೆ ಚೀಟಿಯನ್ನು ಹಚ್ಚಿದ ಸ್ವವಿಳಾಸದ ಲಕೋಟಿಯನ್ನು ಕಳುಹಿಸಿ ಪಡೆದುಕೊಂಡು ನವೆಂಬರ್ .30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.0821–234528 ಗೆ ಕರೆ ಮಾಡಿ ಸಂಪರ್ಕಿಸಬಹುದು.

# ಮನೆ ಗೆದ್ದು ಮಾರು ಗೆಲ್ಲು ಅಥವಾ ಮನ ಗೆದ್ದು ಮಾರು ಗೆಲ್ಲು



**ಹೀಗೆ ಒಂದು ಜನಪದೀಯ – ಅನುಭಾವದ ಮಾತು ಚಾಲ್ತಿಯಲ್ಲಿದೆ. ಇದರ ವಾಸ್ತವತೆಯ ಬಗ್ಗೆ ಯೋಚಿಸತೊಡಗಿದಾಗ.....**



ಮನೆ ಎಂದರೆ ಕುಟುಂಬ. ಕುಟುಂಬವನ್ನು ಸರಿಯಾಗಿ ಮತ್ತು ತೃಪ್ತಿಕರವಾಗಿ ನಿರ್ವಹಿಸಿದ ನಂತರ ಇತರ ಮುಖ್ಯವಾಗಿ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡರೆ ಮಾತ್ರ ಯಶಸ್ವಿಯಾಗಲು ಸಾಧ್ಯ. ಮನೆಯಲ್ಲಿಯೇ ಅತೃಪ್ತಿ ಇದ್ದರೆ ಅಥವಾ ಅದನ್ನು ಉತ್ತಮವಾಗಿ ನಿರ್ವಹಿಸದೆ ಸಮಾಜವನ್ನು ತಿದ್ದುವುದು ಸಾಧ್ಯವಿಲ್ಲ ಅದು ಒಂದು ರೀತಿಯ ವ್ಯಂಗ್ಯ ಎಂದು ಹೇಳಲಾಗುತ್ತದೆ. ಇದು ಸರಿಯೇ – ವಾಸ್ತವವೇ....

ಆಧುನಿಕ ಸಂಕೀರ್ಣ ಬದುಕಿನ ಕುಟುಂಬಗಳನ್ನು ಗಮನಿಸಿದಾಗ ಮನೆ ಎಂಬ ಈ ಮಾತುಗಳು ತುಂಬಾ ಪರಿಣಾಮಕಾರಿ ಎಂದು ಅನಿಸುವುದಿಲ್ಲ. ಮನೆ ಗೆಲ್ಲುವುದು ಅದರಲ್ಲೂ ಕೌಟುಂಬಿಕ ವ್ಯವಸ್ಥೆಯನ್ನು ಗೆಲ್ಲುವುದು ಅಷ್ಟು ಸುಲಭವಲ್ಲ. ಬಹುಶಃ ನಂಬುಗೆಯ ಏಳು ಜನ್ಮವಾದರೂ ಸಾಕಾಗುವುದಿಲ್ಲ......

ಮಧ್ಯಮವರ್ಗದ ಬದುಕು ತುಂಬಾ ಕಷ್ಟಕರ. ಅಪ್ಪ ಅಮ್ಮ ಗಂಡ ಹೆಂಡತಿ ಮಕ್ಕಳು ಅತ್ತೆ ಮಾವ ಸೊಸೆ ಅಳಿಯ ಮೈದುನ ಅತ್ತಿಗೆ ಅಜ್ಜ ಅಜ್ಜಿ ಈ ರೀತಿಯ ಸಂಬಂಧಗಳನ್ನು ನಿಭಾಯಿಸುವುದು ತುಂಬಾ ಕಠಿಣ. ನಗರ ಜೀವನದಲ್ಲಿ ಮತ್ತಷ್ಟು ಕಷ್ಟ. ಒಬ್ಬೊಬ್ಬರ ಅಭಿರುಚಿ, ಮನೋಭಾವ, ಅವರ ಗೆಳೆಯರ ಮಾತುಗಳು ಹೀಗೆ ಸಾಮಾಜಿಕ ವ್ಯವಸ್ಥೆಯೇ ಸ್ವಲ್ಪ ಗೊಂದಲದ ಗೂಡಾಗಿದೆ. ದೂರದಿಂದ ಹೇಳುವುದು, ಹೊಂದಾಣಿಕೆ ಅವಶ್ಯಕತೆ ಇದೆ ಎಂಬುದೆಲ್ಲಾ ಸುಲಭ. ವಾಸ್ತವದಲ್ಲಿ ಇದು ಬಹುಕಷ್ಟ. ಇಡೀ ಬದುಕನ್ನೇ ಇದಕ್ಕಾಗಿ ಸವೆಸಬೇಕಾಗುತ್ತದೆ. ಆಗಲೂ ಸರಿಯಾಗುತ್ತದೆ ಎಂಬ ಖಚಿತತೆ ಇಲ್ಲ. ಕೆಲವು ಉದಾಹರಣೆಗಳನ್ನು ಹೊರತುಪಡಿಸಿ ಬಹುತೇಕ ಕುಟುಂಬಗಳಲ್ಲಿ ವಿವಿಧ ಬಗೆಯ ಅಸಮಾಧಾನಗಳು ಇದ್ದೇ ಇರುತ್ತದೆ. ಕೆಲವು ಬಹಿರಂಗವಾಗಿ ವಿಭಜನೆಯಾದರೆ ಮತ್ತೆ ಕೆಲವು ಆಂತರಿಕವಾಗಿ ಪ್ರತ್ಯೇಕಿಸಲ್ಪಟ್ಟಿರುತ್ತದೆ. ಹಾಗಾದರೆ ಈ ಪರಿಸ್ಥಿತಿಯಲ್ಲಿರುವ ಯಾವುದೇ ವ್ಯಕ್ತಿ ಸಾಮಾಜಿಕ ಸೇವೆಯಲ್ಲಿ ತೊಡಗಲು ಅನರ್ಹನೇ. ಮನೆಯೇ ಗೆಲ್ಲಲಾಗದ ವ್ಯಕ್ತಿ ಹೊರಗೆ ಇನ್ನೇನು ಮಾಡಲು ಸಾಧ್ಯ ಎಂದು ನಿರ್ಲಕ್ಷಿಸಬೇಕೆ......

ಸಮಾಜ ಸೇವೆಯಲ್ಲಿ ತೊಡಗಬೇಕೆಂಬ ತುಡಿತದ ವ್ಯಕ್ತಿ ಯಾವುದೇ ಸಾಂಸಾರಿಕ ಜವಾಬ್ದಾರಿ ಹೊಂದಿರಬಾರದೇ ಅಥವಾ ಸಾಂಸಾರಿಕ ಬಂಧನಕ್ಕೆ ಒಳಗಾದ ಕೆಲವು ವರ್ಷಗಳ ನಂತರ ಸೇವೆ ಮಾಡಬೇಕೆಂಬ ಅಭಿಲಾಷೆ ಉಂಟಾದಾಗ ಕೌಟುಂಬಿಕ ವ್ಯವಸ್ಥೆಯ ವಿಫಲತೆ ಅದಕ್ಕೆ ಅಡ್ಡಿಯಾಗಬಹುದೇ ಅಥವಾ ವೈಯಕ್ತಿಕ ಬದುಕು ಮತ್ತು ಸಾಮಾಜಿಕ ಸೇವೆ ಎರಡು ಬೇರೆ ಬೇರೆಯೇ ಅಥವಾ ಒಂದಕ್ಕೊಂದು ಪೂರಕವೇ ಅದನ್ನು ಬೇರ್ಪಡಿಸಲು ಸಾಧ್ಯವಿಲ್ಲವೇ.......



ಉತ್ತರ ಅಷ್ಟು ಸುಲಭವಲ್ಲ. ಭಾರತದ ಸಂಕೀರ್ಣ ಸಾಮಾಜಿಕ ವ್ಯವಸ್ಥೆಯಲ್ಲಿ ಇದು ಬಹು ಆಯಾಮ ಹೊಂದಿದೆ ಮತ್ತು ವೈಯಕ್ತಿಕವಾಗಿ ವ್ಯಕ್ತಿಯಿಂದ ವ್ಯಕ್ತಿಗೆ ಭಿನ್ನವಾಗಿರುತ್ತದೆ....

ಆದರೆ ಮನ ಗೆದ್ದು ಮಾರು ಗೆಲ್ಲು ಎಂಬುದು ವಾಸ್ತವಕ್ಕೆ ಹೆಚ್ಚು ಹತ್ತಿರವಾಗಿದೆ.

ಮನೆ ಎಂಬ ವಿಷಯ ಬಂದಾಗ ಅಲ್ಲಿ ಇತರರು ಇರುತ್ತಾರೆ. ಆದರೆ ಮನ ಸಂಪೂರ್ಣ ವೈಯಕ್ತಿಕ ಮತ್ತು ನಾವು ಒಬ್ಬರೇ ಇರುತ್ತೇವೆ. ನಮ್ಮ ಎಲ್ಲಾ ಅರಿಷಡ್ವರ್ಗಗಳ ನಿಯಂತ್ರಣ ನಮಗೆ ಸೇರಿರುತ್ತದೆ. ಸಮಾಜ ಸೇವೆಗೆ ಬೇಕಾದ ಮತ್ತು ಬೇಡದ ಎಲ್ಲವನ್ನೂ ನಾವೇ ನಿರ್ಧರಿಸಬಹುದು.....

ನಮ್ಮ ಒಳಗಿನ ಎಲ್ಲಾ ಸ್ವಾರ್ಥ ದುರಾಸೆ ಮುಖವಾಡಗಳನ್ನು ಆತ್ಮಾವಲೋಕನ ಮಾಡಿಕೊಂಡು ನಿಷ್ಕಲ್ಮಶ ಮನಸ್ಸಿನಿಂದ ಮನ ಗೆದ್ದು ಮಾರು ಗೆಲ್ಲಲು ಹೊರಡಬಹುದು. ಆದ್ದರಿಂದ ಮನೆ ಗೆದ್ದು ಮಾರು ಗೆಲ್ಲು ಎಂಬುದು ಕಷ್ಟ ಸಾಧ್ಯ. ಕೆಲವರಿಗೆ ಮಾತ್ರ ಸೀಮಿತ. ಆದರೆ ಮನ ಗೆದ್ದು ಮಾರು ಗೆಲ್ಲು ಎಂಬುದು ವಾಸ್ತವಕ್ಕೆ ಹತ್ತಿರ ಮತ್ತು ಪ್ರತಿಯೊಬ್ಬರು ಪ್ರಯತ್ನಿಸಬಹುದು.

ಇದರ ಒಟ್ಟು ಸಾರಾಂಶ.....


ಒಂದು ವೇಳೆ ಮನೆ ಗೆದ್ದು ಮಾರ ಗೆಲ್ಲಲು ಪ್ರಯತ್ನಿಸಿದರೆ ಉತ್ತಮ, ಹಾಗೆಯೇ ಮನೆ ಗೆಲ್ಲಲು ವಿಫಲರಾದರು ಅದರ ಅನುಭವದ ಆಧಾರದಲ್ಲಿ ಮಾರು ಗೆಲ್ಲಲು ಹೊರಡುವುದು ತಪ್ಪೇನಲ್ಲ. ಇನ್ನಷ್ಟು ಹೆಚ್ಚು ತೊಡಗಿಸಿಕೊಳ್ಳುವ ಮುಖಾಂತರ ಇಲ್ಲಿ ಯಶಸ್ವಿಯಾಗುವ ಸಾಧ್ಯತೆಯು ಇರುತ್ತದೆ. ಇದು ವ್ಯಕ್ತಿಗಳ ಮನಸ್ಥಿತಿಯನ್ನು – ವ್ಯಕ್ತಿತ್ವವನ್ನು ಅವಲಂಬಿಸಿರುತ್ತದೆ.

ಜೊತೆಗೆ ಮನ ಗೆದ್ದು ಮಾರು ಗೆಲ್ಲುವುದು ಅತ್ಯಂತ ಅವಶ್ಯ. ಮನ ಗೆಲ್ಲದೇ ಮಾರು ಗೆಲ್ಲುವುದು ಆತ್ಮವಂಚನೆಯಾಗುತ್ತದೆ....

ಲೋಕ ರೂಢಿಯ ಗಾದೆ ಮಾತುಗಳ ಒಂದು ಸಣ್ಣ ಸರಳ ವಿಮರ್ಶೆ. ಇದನ್ನು ಮತ್ತಷ್ಟು ವಿಶಾಲವಾಗಿ – ಆಳವಾಗಿ ಇನ್ನೂ ವಿವಿಧ ಆಯಾಮಗಳಲ್ಲಿ ಚರ್ಚಿಸಬಹುದು. ಆ ನಿಟ್ಟಿನಲ್ಲಿ ಯೋಚಿಸಿ ಎಂಬ ಮನವಿಯೊಂದಿಗೆ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಚಿತ್ರದುರ್ಗ ನಾಯಕ ಅರಸರ ಬಗ್ಗೆ ರಾಷ್ಟ್ರೀಯ ವಿಚಾರಸಂಕಿರಣ: ಪ್ರೊ.ಬಿ.ಎಸ್.ಮಂಜುನಾಥ

» **ಚಳ್ಳಕೆರೆ**

ನ.29 ಮತ್ತು 30 ಎರಡು ದಿನಗಳ ಕಾಲ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಚಿತ್ರದುರ್ಗ ನಾಯಕ ಅರಸರ ಬಗ್ಗೆ ರಾಷ್ಟ್ರೀಯ ವಿಚಾರಸಂಕಿರಣವನ್ನು ಹಮ್ಮಿಕೊಳ್ಳುವ ಮೂಲಕ ಹೊಸ ಇತಿಹಾಸ ಸೃಷ್ಠಿಮಾಡಲಿ ಎಂದು ಕಾಲೇಜು ಪ್ರಾಚಾರ್ಯ ಪ್ರೊ.ಬಿ.ಎಸ್.ಮಂಜುನಾಥ ತಿಳಿಸಿದರು.

ಅವರು, ಸೋಮವಾರ ಕಾಲೇಜಿನಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಹಂಪಿ ಕನ್ನಡ ವಿಶ್ವವಿದ್ಯಾಲಯದ ವಾಲ್ಮೀಕಿ ಅಧ್ಯಯನ ಪೀಠ, ಕಾಲೇಜು ಶಿಕ್ಷಣ ಇಲಾಖೆ ಮತ್ತು ಕನ್ನಡ ಸಾಹಿತ್ಯ ಪರಿಷತ್ ನ.29 ಮತ್ತು 30 ಎರಡು ದಿನಗಳ ಕಾಲ ಕಾಲೇಜಿನ ವಿಶೇಷ ಸಭಾಂಗಣದಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿದೆ. ಕಾರ್ಯಕ್ರಮ ಯಶಸ್ವಿಗೆ ಎಲ್ಲರೂ ಕೈಜೋಡಿಸುವಂತೆ ಮನವಿ ಮಾಡಿದರು. ನ.29 ಶುಕ್ರವಾರ ಬೆಳಗ್ಗೆ 10ಕ್ಕೆ ಹಂಪಿ ವಿಶ್ವವಿದ್ಯಾಲಯ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಪ್ರಾಧ್ಯಾಪಕ ಡಾ.ವೆಂಕಟಗಿರಿದಳವಾಯಿ ಆಶಯ ನುಡಿಯಾಡಲಿದ್ದು, ಆಂಧ್ರಪ್ರದೇಶದ ಅನಂತಪುರದ ಕೃಷ್ಣದೇವರಾಯ ವಿವಿಯ ಪ್ರಾಧ್ಯಾಪಕ ಡಾ.ಎನ್.ಸದಾಶಿವರೆಡ್ಡಿ, ಜಾನಪದ ಮತ್ತು ರಂಗಭೂಮಿ ತಜ್ಞ ಪಿ.ತಿಪ್ಪೇಸ್ವಾಮಿ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜೆ.ಟಿ.ವೀರಭದ್ರಸ್ವಾಮಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದರು.



## ಪ್ರತಿಮನೆಯಲ್ಲೂ ಶೌಚಾಲಯ ನಿರ್ಮಾಣಕ್ಕೆ ಸರ್ಕಾರ ಯತ್ನ

» **ಚಳ್ಳಕೆರೆ**

ಗ್ರಾಮೀಣ ಭಾಗದಲ್ಲಿ ಪ್ರತಿಯೊಂದು ಮನೆಯೂ ಶೌಚಾಲಯ ಹೊಂದಿರಬೇಕೆಂಬ ವಿಶೇಷ ಯೋಜನೆಯನ್ನು ಜಾರಿಗೆ ತಂದಿದ್ದು, ನಮ್ಮ ಶೌಚಾಲಯ ನಮ್ಮ ಗೌರವ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾ ಪಂಚಾಯಿತಿ ಸಹಾಯಕ ಯೋಜನಾ ಅಧಿಕಾರಿ ಸುಮಾ ಮನವಿ ಮಾಡಿದರು.



ಅವರು, ಮೀರಸಾಬಿಹಳ್ಳಿ ಸರ್ಕಾರಿ ಹಿರಿಯಪ್ರಾಥಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ರಾಜ್ಯ ಸರ್ಕಾರ ಸಾರ್ವಜನಿಕರ ಹಿತಕ್ಕಾಗಿ ಅನೇಕ ಯೋಜನೆ ಜಾರಿಗೆ ತಂದಿದೆ. ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಉತ್ತಮ ದೃಢ ಹೆಜ್ಜೆ ಇಟ್ಟಿದೆ. ಮೀರಸಾಬಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಎಲ್ಲಾ ಮನೆಗಳಲ್ಲೂ ಕಡ್ಡಾಯವಾಗಿ ಶೌಚಾಲಯವನ್ನು ನಿರ್ಮಿಸುವ ನಿಟ್ಟಿನಲ್ಲಿ ಬಯಲುಮುಕ್ತ ಶೌಚ ಗ್ರಾಮ ಮಾಡುವ ನಿಟ್ಟಿನಲ್ಲಿ ಎಲ್ಲರೂ ಕಾರ್ಯಕ್ರಮದ ಯಶಸ್ವಿಗೆ ಕೈಜೋಡಿಸಿ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಪ್ರತಿಗ್ರಾಮದ ಪ್ರತಿಮನೆ ಶೌಚಾಲಯ ಹೊಂದಿರುವಂತೆ ಎಲ್ಲಾ ಶಾಲೆಗಳಲ್ಲೂ ಶೌಚಾಲಯ ಸೌಲಭ್ಯವನ್ನು ನೀಡಲು ಸರ್ಕಾರ ನಿರ್ಧರಿಸಿದೆ. ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಸಹಯೋಗದೊಂದಿಗೆ ಈ ಕಾರ್ಯಕ್ರಮ ನಡೆಯಲಿದೆ. ವಿಶೇಷವಾಗಿ ವಿದ್ಯಾರ್ಥಿಗಳಿಗೆ ಶಿಕ್ಷಣದ ಕಲಿಕೆಯ ಜೊತೆಗೆ ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಉತ್ತಮ ಹೆಜ್ಜೆ ಇಟ್ಟಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T